ಸಂಪುಟ 01 | ಸಂಚಿಕೆ 66 | ಶುಕ್ರವಾರ 16 ಜನವರಿ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**ರಾಷ್ಟ್ರೀಯ ನವೋದ್ಯಮ ದಿನ**

2021 ರಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಜನವರಿ 16 ಅನ್ನು ರಾಷ್ಟ್ರೀಯ ನವೋದ್ಯಮ ದಿನವೆಂದು ಘೋಷಿಸಿದರು. ಅಂದಿನಿಂದ ಸರ್ಕಾರ ಮತ್ತು ಸರ್ಕಾರೇತರ ಸಂಸ್ಥೆಗಳು ಭಾರತೀಯ ನವೋದ್ಯಮ ಪರಿಸರ ವ್ಯವಸ್ಥೆಯನ್ನು ಶ್ಲಾಘಿ-ಸಲು ಮತ್ತು ಉತ್ತೇಜಿಸಲು ವಿವಿಧ ಕಾರ್ಯಕ್ರಮಗಳು ಮತ್ತು ಕಾರ್ಯಕ್ರಮಗಳನ್ನು ಆಯೋಜಿಸುತ್ತಿವೆ.

## ಸುಭಾಷಿತ

ಮುಂದಿನ ಪೀಳಿಗೆಯು ಎಂದೆಂದಿಗೂ ಹಿಂದಿನ ಪೀಳಿಗೆಗಿಂತ ಉತ್ತಮವಾಗಿಯೇ ಇರಬೇಕು. ಇಲ್ಲವಾದರೆ, ವಿಶ್ವವು ಮುನ್ನಡೆ ಸಾಧಿಸುತ್ತಿದೆ ಎಂದು ಭಾವಿಸಲಾಗದು.

**ಕಪಿಲ್ ದೇವ್**

# ಸಚಿವ ಪ್ರಿಯಾಂಕ್ ಖರ್ಗೆ ಭೇಟಿಯಾದ ನ್ಯೂಜಿಲೆಂಡ್‌ನ ನಾವೀನ್ಯತೆ ಪರಿಸರ ವ್ಯವಸ್ಥೆಯ ನಿಯೋಗ

❑ ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಪಿಎಂಎಸ್‌ಎ ಕಾರ್ಯಕ್ರಮದಡಿಯಲ್ಲಿ ಸಹಯೋಗವನ್ನು ಅನ್ವೇಷಿಸಲು ನ್ಯೂಜಿಲೆಂಡ್‌ನ ನಾವೀನ್ಯತೆ ಪರಿಸರ ವ್ಯವಸ್ಥೆಯ ನಿಯೋಗ ಸಚಿವ ಪ್ರಿಯಾಂಕ್ ಖರ್ಗೆ ಅವರನ್ನು ಭೇಟಿ ಮಾಡಿ ಚರ್ಚೆ ನಡೆಸಿತು.ಜನರಿಂದ ಜನರಿಗೆ ಸಂಬಂಧಗಳನ್ನು ಬಲಪಡಿಸುವುದು ಮತ್ತು ಕರ್ನಾಟಕ ಮತ್ತು ನ್ಯೂಜಿಲೆಂಡ್ ನಡುವೆ ದೀರ್ಘಕಾಲೀನ ಸಾಂಸ್ಥಿಕ ಸಂಪರ್ಕಗಳನ್ನು ನಿರ್ಮಿಸುವತ್ತ ಈ ಸಂವಾದ ಕೇಂದ್ರೀಕರಿಸಿದೆ ಎಂದು ರಾಜ್ಯ ಐಟಿ-ಬಿಟಿ ಸಚಿವರು ಹೇಳಿಕೆಯಲ್ಲಿ ತಿಳಿಸಿದ್ದಾರೆ.**

ಪ್ರಧಾನ ಮಂತ್ರಿಗಳ ಏಷ್ಯಾ ವಿದ್ಯಾರ್ಥಿವೇತನವು ನ್ಯೂಜಿಲೆಂಡ್ ಸರ್ಕಾರದಿಂದ ಅನುದಾನಿತ ಕಾರ್ಯಕ್ರಮವಾಗಿದ್ದು, ಇದು ನಾವೀನ್ಯತೆ, ಶಿಕ್ಷಣ ಮತ್ತು ನಾಯಕತ್ವದಲ್ಲಿ ಪಾಲುದಾರಿಕೆಗಳನ್ನು ಗಾಢವಾಗಿಸುವ ಮತ್ತು ಜಾಗತಿಕ ಸಾಮರ್ಥ್ಯಗಳನ್ನು ನಿರ್ಮಿಸುವ ಗು-ರಿಯನ್ನು ಹೊಂದಿದೆ ಎಂದು ಖರ್ಗೆ ಹೇಳಿದರು. ನಿಯೋಗದಲ್ಲಿ ನ್ಯೂಜಿಲೆಂಡ್‌ನ ಸಂಶೋಧನೆ, ತಂತ್ರಜ್ಞಾನ, ಶಿಕ್ಷಣ ಮತ್ತು ನಾವೀನ್ಯತೆ ಕ್ಷೇತ್ರಗಳ ಪ್ರತಿನಿಧಿಗಳು ಸೇರಿದ್ದಾರೆ.ಸಭೆಯ ಸಂದರ್ಭದಲ್ಲಿ,



ಭಾರತದ ನಾಲ್ಕನೇ ಅತಿದೊಡ್ಡ ತಂತ್ರಜ್ಞಾನ ಕ್ಲಸ್ಟರ್ ಮತ್ತು ಸಂಶೋಧನೆ ಮತ್ತು ಅಭಿವೃದ್ಧಿ, ನಾವೀನ್ಯತೆ ಮತ್ತು ಜಾಗತಿಕ ಸಾಮರ್ಥ್ಯ ಕೇಂದ್ರಗಳಿಗೆ (ಜಿಸಿಸಿ) ಪ್ರಮುಖ ಕೇಂದ್ರವಾಗಿ ಕರ್ನಾಟಕದ ಸ್ಥಾನವನ್ನು ಖರ್ಗೆ ಎತ್ತಿ ತೋರಿಸಿದರು.

250 ಕ್ಕೂ ಹೆಚ್ಚು ಎಂಜಿನಿಯ-ರಿಂಗ್ ಕಾಲೇಜುಗಳು ಮತ್ತು ಉನ್ನತ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆಗಳ ದೊಡ್ಡ ಜಾಲವನ್ನು ಹೊಂದಿರುವ ರಾಜ್ಯದ ಬಲವಾದ ಪ್ರತಿಭಾ ನೆಲೆಯನ್ನು ಅವರು ಉಲ್ಲೇಖಿಸಿದರು, ಇದು ಶೈಕ್ಷಣಿಕ ಮತ್ತು ಕೈಗಾ-ರಿಕಾ ಸಹಯೋಗಕ್ಕೆ ನೈಸರ್ಗಿಕ ತಾಣವಾಗಿದೆ. ಎರಡೂ ಪ್ರದೇಶಗಳ ಸ್ಟಾರ್ಟ್‌ಅಪ್‌ಗಳು, ಸಂಶೋಧಕರು ಮತ್ತು ಕಂಪನಿಗಳು ಮಾರುಕಟ್ಟೆಗಳಲ್ಲಿ ಪರಿಹಾರಗಳನ್ನು ಅಳೆಯಲು ಅನುವು ಮಾಡಿಕೊಡಲು ಕೌಶಲ್ಯ ಮತ್ತು ಮಾರುಕಟ್ಟೆ-ಪ್ರವೇಶ ಕಾರಿಡಾರ್‌ಗಳನ್ನು ರಚಿಸುವ ಅಗತ್ಯವನ್ನು ಸಚಿವರು ಒತ್ತಿ ಹೇಳಿದರು. ಅವರು ಕರ್ನಾಟಕದ ಡೀಪ್‌ಟೆಕ್ ದಶಕದ ಮಾರ್ಗಸೂಚಿಯನ್ನು ವಿವರಿಸಿದರು ಮತ್ತು ಕೃತಕ ಬುದ್ಧಿಮತ್ತೆ, ಏರೋಸ್ಪೇಸ್, ಹವಾಮಾನ ಮತ್ತು ಸಂವೇದಕ ತಂತ್ರಜ್ಞಾನಗಳು, ಕೃಷಿ ತಂತ್ರಜ್ಞಾನ ಮತ್ತು ಸಾಗರ ಜೈವಿಕ ತಂತ್ರಜ್ಞಾನದಂತಹ ಕ್ಷೇತ್ರಗಳಲ್ಲಿ ಸಹಯೋಗವನ್ನು ಸೂಚಿಸಿದರು.

ಸ್ಟಾರ್ಟ್‌ಅಪ್‌ಗಳು, ಶೈಕ್ಷಣಿಕ, ಕೈಗಾ-ರಿಕೆ ಮತ್ತು ಸರ್ಕಾರಿ ಸಂಸ್ಥೆಗಳೊಂದಿಗೆ ನಿರಂತರ ನಿಶ್ಚಿತಾರ್ಥವನ್ನು ಸಕ್ರಿಯಗೊಳಿಸಲು ನಿಯೋಗವು ತನ್ನ ಗ್ಲೋಬಲ್ ಇನ್ನೋವೇಶನ್ ಅಲೈಯನ್?ಸ ವೇದಿಕೆಯ ಮೂಲಕ ಇಲಾಖೆಯೊಂದಿಗೆ ನಿಕಟವಾಗಿ ಕೆಲಸ ಮಾಡಬೇಕೆಂದು ಖರ್ಗೆ ಸೂಚಿಸಿದರು.ಸಹಯೋಗದ ಆದ-ೃತೆಯ ಕ್ಷೇತ್ರಗಳನ್ನು ಗುರುತಿಸುವಲ್ಲಿ ಮತ್ತು ಅವುಗಳನ್ನು ಮುಂದಕ್ಕೆ ಕೊಂಡೊಯ್ಯಲು ಕಾರ್ಯನಿರತ ಗುಂಪನ್ನು ರಚಿಸುವಲ್ಲಿ ನಿಯೋಗವು ಆಸಕ್ತಿ ವ್ಯಕ್ತಪಡಿಸಿತು. ತಿಳುವಳಿಕೆ ಪತ್ರ ಸೇರಿದಂತೆ ಔಪಚಾರಿಕ ಸಹಯೋಗ ಚೌಕಟ್ಟನ್ನು ಎರಡೂ ಕಡೆಯವರು ಅನ್ವೇಷಿಸುತ್ತಿದ್ದಾರೆ ಎಂದು ಹೇಳಿಕೆ ತಿಳಿಸಿದೆ.

## ತಾಲೂಕು ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಗೆ ಸದ್ದಾಂ ಹುಸೇನ್ ಆಯ್ಕೆ

❑ ನೈಜ್ಯ ದೆಸೆ ನ್ಯೂಸ್

**ಅರಕೇರಾ: ತಾಲೂಕಿನ ಬಿ.ಗಣೇಕಲ್ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಮೂಕನಾಯಕ ತಾಂಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹ ಶಿಕ್ಷಕರಾದ ಸದ್ದಾಂ ಹುಸೇನ್ ತಾಲೂಕು ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಗೆ ಭಾಜನರಾಗಿದ್ದಾರೆ.**



ಇವರು ಮೊದಲು ಪೋಲಿಸ್ ಇಲಾಖೆಯಲ್ಲಿ ಸೇವೆ ಸಲ್ಲಿಸಿ ನಂತರ ಶಿಕ್ಷಕರ ಹುದ್ದೆಗೆ ನೇಮಕಗೊಂಡರು ಸದ್ದಾಂ ಹುಸೇನ್ ಮಕ್ಕಳಿಗೆ ಪಾಠ ಜೊತೆಗೆ ಪಠ್ಯೇತರ ಚಟುವಟಿ-ಕೆಗಳಾದ ಹಾಡು, ಕಥೆ, ಡ್ಯಾನ್ಸ್ ಮತ್ತು ಪಿಕ್ನಿಕ್ ಹೀಗೆ ಹಲವಾರು ಚಟುವಟಿಕೆಗಳ ಮುಖಾಂತರ ಮಕ್ಕಳ ಕಲಿಕೆಗೆ ಪ್ರೋತ್ಸಾಹಿಸುತ್ತಿದ್ದಾರೆ. ವಿದ್ಯಾರ್ಥಿಗಳ ಅಚ್ಚು-ಮೆಚ್ಚಿನ ಶಿಕ್ಷಕರಾಗಿದ್ದಾರೆ ಇಂತಹ ಶಿಕ್ಷಕರಿಗೆ ತಾಲೂಕು ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ದೊರೆತಿದ್ದು ಗ್ರಾಮಸ್ಥರು ಮತ್ತು ಬಿ.ಗಣೇಕಲ್ ಸ್ನೇಹ ಬಳಗ ಶುಭಹಾರೈಸಿದ್ದಾರೆ. ದೇವದುರ್ಗ ತಾಲೂಕಿನ ಹೂವಿನಹೆಡಗಿ ಗಡ್ಡೆಗೂಳಿ ಬಸವೇಶ್ವರ ಕಲ್ಯಾಣ ಮಂಟಪದಲ್ಲಿ ಜನವರಿ 17 ಶನಿವಾರ ರಂದು ನಡೆಯುವ ತಾಲೂಕು ಮಟ್ಟದ ಗುರು ನಮನ, ಶಿಕ್ಷಕರ ದಿನಾಚರಣೆ ಹಾಗೂ ಉತ್ತಮ ಶಿಕ್ಷಕರ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಶಾಲಾ ಶಿಕ್ಷಣ ಇಲಾಖೆ ಪ್ರಶಸ್ತಿ ಪ್ರಧಾನ ಮಾಡಲಿದೆ.

## ಎಡದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ ಕಾರ್ಯಕ್ರಮ ಮುಂದೂಡಿಕೆ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಎಡದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ 2026 ಕಾರ್ಯಕ್ರಮದ ದಿನಾಂಕವನ್ನು ಮುಂದೂಡಲಾಗಿದೆ. ಈ ಮೊದಲು ಜನವರಿ 29, 30 ಮತ್ತು 31ರಂದು ಮೂರು ದಿನಗಳ ಕಾಲ ರಾಯಚೂರು ನಗರದಲ್ಲಿ ವಿಜೃಂಭಣೆಯಿಂದ ಆಚರಿಸಲು ತೀರ್ಮಾನಿಸಲಾಗಿದ್ದ ಉತ್ಸವವನ್ನು,**

ಅನಿವಾರ್ಯ ಕಾರಣಗಳಿಂದಾಗಿ ಫೆಬ್ರವರಿ 06, 07 ಮತ್ತು 08, 2026ರಂದು ಮೂರು ದಿನಗಳ ಕಾಲ ನಡೆಸಲಾಗುವುದು ಎಂದು ಮಾನ್ಯ ಅಪರ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ. ಸಂಬಂಧಪಟ್ಟ ಎಲ್ಲಾ ಇಲಾಖೆ ಅಧಿಕಾ-ರಿಗಳು, ಸಂಘ?ಸಂಸ್ಥೆಗಳು ಹಾಗೂ ಸಾರ್ವಜನಿಕರು ಈ ದಿನಾಂಕ ಬದಲಾವಣೆಯನ್ನು ಗಮನಿಸಿ ಸಹಕರಿಸುವಂತೆ ಕೋರಲಾಗಿದೆ.




## ಸಕಲ ಸರ್ಕಾರಿ ಗೌರವಗಳೊಂದಿಗೆ ಸಿದ್ದರಾಮನಂದ ಸ್ವಾಮೀಜಿ ಅಂತ್ಯಕ್ರಿಯೆ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ತಿಂಥಣಿಯ ಕನಕ ಗುರು ಪೀಠದ ಆವರಣದಲ್ಲಿಯೇ ಸಕಲ ಸರ್ಕಾರಿ ಗೌರವಗಳೊಂದಿಗೆ ಸಿದ್ದರಾಮನಂದ ಸ್ವಾಮೀಜಿ ಅಂತ್ಯಕ್ರಿಯೆ ಅಪಾರ ಭಕ್ತ ಸಮೂಹದ ಸಮ್ಮುಖದಲ್ಲಿ ನೆರವೇರಿಸಲಾಯಿತು.**

ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ ಹಾಗೂ ಸಣ್ಣ ನೀರಾವರಿ ಸಚಿವ ಎನ್.ಎಸ್.ಬೋಸರಾಜು ಅವರು ಸರ್ಕಾರದ ಪ್ರತಿನಿಧಿಯಾಗಿ ಅಂತ್ಯಸಂಸ್ಕಾರದಲ್ಲಿ ಪಾಲ್ಗೊಂಡಿದ್ದರು.



ಜಿಲ್ಲೆಯ ಶಾಸಕರು, ವಿಧಾನ ಪರಿಷತ್ ಸದಸ್ಯರು ಸೇರಿದಂತೆ ಪ್ರಮುಖ ಗಣ್ಯರು ಸ್ವಾಮೀಜಿ ಅಂತಿಮ ದರ್ಶನ ಪಡೆದರು. ಅಂತ್ಯ ಸಂಸ್ಕಾರದಲ್ಲಿ 15 ಸಾವಿರಕ್ಕೂ ಹೆಚ್ಚು ಭಕ್ತರು ಪಾಲ್ಗೊಂಡಿದ್ದರು.

## ಸಂಭ್ರಮದ ಸಂಕ್ರಾಂತಿ ಹಬ್ಬ-ಗೌಡೂರು ಸರ್ಕಾರಿ ಪ್ರೌಢ ಶಾಲೆ

❑ ನೈಜ್ಯ ದೆಸೆ ನ್ಯೂಸ್

**ಸಮೀಪರ ಗೌಡೂರು ಸರ್ಕಾರಿ ಪ್ರೌಢ ಶಾಲೆಯಲ್ಲಿ ಸಂಕ್ರಾಂತಿ ಹಬ್ಬವನ್ನು ಶಿಕ್ಷಕರು ಹಾಗೂ ಮಕ್ಕಳು ಸಂಭ್ರಮದಿಂದ ಬುಧವಾರ ಆಚರಣೆ ಮಾಡಿದರು.**

ಮುಖ್ಯ ಶಿಕ್ಷಕ ಬಿ.ವಿದ್ಯಾವತಿ, ಸಚೇತನ ಚಟುವಟಿಕೆ ಹಾಗೂ ಸಂಕ್ರಾಂತಿ ಹಬ್ಬದ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ನಾಡಿನ ಸಂಸ್ಕೃತಿ ಉಳಿಯಬೇಕಾದರೆ ಮುಂದಿನ ಪಿಳಿಗೆಗೆ ಹಬ್ಬಗಳ ಬಗ್ಗೆ ತಿಳುವಳಿಗೆ ಅವಶ್ಯಕ. ಮಕ್ಕಳಲ್ಲಿ ಓದಿನ ಬಗ್ಗೆ ಅಭಿರುಚಿ ಕಡಿಮೆಯಾಗದಿರಲಿ ಎಂಬ ಕಾರಣಕ್ಕೆ ಹಬ್ಬಗಳ ರೂಪದಲ್ಲಿ ಕಲಿಕೆಗೆ ಪ್ರೇರಣೆ ನೀಡಲಾಗುತ್ತಿದೆ ಎಂದರು.

ಇಂದಿನ ಕಂಪ್ಯೂಟರ್ ಯುಗದಲ್ಲಿ ವಿದ್ಯೆ ಇಲ್ಲದಿದ್ದರೆ ಬಡವನಾಗುತ್ತಾನೆ



ಅದಕ್ಕಾಗಿ ಮಕ್ಕಳು ಅಭ್ಯಾಸದ ಕಡೆ ಗಮನಹರಿಸಿ' ಎಂದು ಹೇಳಿದರು. ಕಾರ್ಯಕ್ರಮ ನಂತರ ಮಕ್ಕಳು ಹಾಗೂ ಶಿಕ್ಷಕರು ಎಳ್ಳು ಬೆಲ್ಲ ವಿನಿಮಯ ಮಾಡಿಕೊಂಡು ಸಂಕ್ರಾಂತಿ ಹಬ್ಬದ ಶುಭಾಶಯ ಕೋರಿದರು. ಈ ವೇಳೆ ಶಿಕ್ಷಕರಾದ ಅಮೀನಾಬೇಗಂ, ಮಹಮದ್ ಫರೀದ್, ದುರ್ಗಾ, ದೀಪಾ, ಚೇತನಾ, ಶಿವಣ್ಣಕೋಠಾ, ಶಿಲ್ಪ, ವಿಜಯಲಕ್ಷ್ಮಿ, ಶ್ವೇತಾ, ಕವಿತಾ, ಉಪಸ್ಥಿತರಿದ್ದರು.

## ನವೋದಯ ನರ್ಸಿಂಗ್ ಕಾಲೇಜಿನಲ್ಲಿ ಸಂಕ್ರಾಂತಿ ಸಂಭ್ರಮ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ನವೋದಯ ನರ್ಸಿಂಗ್ ಕಾಲೇಜಿನ ಬಿ.ಎಸ್‌ಸಿ (ನರ್ಸಿಂಗ್) ಪ್ರಥಮ ಸೆಮಿಸ್ಟರ್ ವಿದ್ಯಾರ್ಥಿಗಳಿಂದ ಮಕರ ಸಂಕ್ರಾಂತಿ ಹಬ್ಬವನ್ನು ಸಂಭ್ರಮದಿಂದ ಆಚರಿಸಲಾಯಿತು. ಡಾ. ದಾನನಗೌಡ ಅವರು ಲಕ್ಷ್ಮೀ ಪೂಜಾ ವಿಧಿಯನ್ನು ನೆರವೇ-ರಿಸಿದರು. ಮುಖ್ಯ ಅತಿಥಿ ಪ್ರೊ. ಹೆಟ್ಸಿ ಸುತನಕುಮಾರಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಭಾಗವಹಿಸಿದವರಿಗೆ ಸಿಹಿ ತಿಂಡಿಗಳನ್ನು ವಿತರಿಸಲಾಯಿತು.**

ಗಾಳಿಪಟ ಹಾರಿಸುವಂತಹ ಮನರಂಜನಾ ಚಟುವಟಿಕೆಗಳು ಕಾರ್ಯಕ್ರಮಕ್ಕೆ ಉತ್ಸಾಹ ತುಂಬಿದವು. ಪ್ರೊ. ರಾಖೀ ಸರ್ಕಾರ್ ಹಾಗೂ ಪ್ರೊ. ತಬಿತಾ ಅವರು ರಂಗೋಲಿ




ಸ್ಪರ್ಧೆಯನ್ನು ಮೌಲ್ಯಮಾಪನ ಮಾಡಿ ವಿಜೇತರಿಗೆ ಪ್ರಮಾಣಪತ್ರಗಳನ್ನು ಪ್ರದಾನ ಮಾಡಿದರು, ಜ್ಯೋತಿಸ್ ಮತ್ತು ತಂಡದವರು ಪ್ರಾರ್ಥನಾ ಗೀತೆ ಹಾಡಿದರು. ಪುಣ್ಯ ಸ್ವಾಗತಿಸಿದರು. ಪಾರ್ವತಿ ವಂದಿಸಿದರು. ಮಕರ ಸಂಕ್ರಾಂತಿ ಹಬ್ಬದ ಪ್ರಯುಕ್ತ ರಾಯಚೂರಲ್ಲಿ ಮಕ್ಕಳು ಗಾಳಿಪಟ ಖರೀದಿಸಿದರು.

# ಜ.27 ರಂದು ವಿಜಯಪುರದಲ್ಲಿ ಉದ್ಯೋಗ ಮೇಳ

❑ ನೈಜ್ಯ ದೆಸೆ ನ್ಯೂಸ್

**ಜನವರಿ 27ರಂದು ನಗರದ ದರ್ಬಾರ ಶಾಲೆಯ ಆವರಣದಲ್ಲಿ ನಡೆಯುವ ಉದ್ಯೋಗ ಮೇಳದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಉದ್ಯೋಗದಾತ ಕಂಪನಿಗಳು ಭಾಗವಹಿಸುವಂತೆ ನೋಡಿಕೊಳ್ಳಬೇಕು ಹಾಗೂ ಜಿಲ್ಲೆಯ ನೀರುದ್ಯೋಗಿ ಯುವಕರಿಗೆ ಉದ್ಯೋಗ ದೊರಕಿಸುವ ನೀಟ್ಟಿನಲ್ಲಿ ಅಂತ್ಯತ ಅಚ್ಚುಕಟ್ಟಾಗಿ ಮೇಳವನ್ನು ಆಯೋಜಿಸಬೇಕೆಂದು ಜಿಲ್ಲಾ ಕೌಶಲ್ಯ ಸಮಿತಿಯ ಅಧ್ಯಕ್ಷರಾದ ಜಿಲ್ಲಾಧಿಕಾರಿ ಡಾ.ಆನಂದ.ಕೆ ಅವರು ಸೂಚನೆ ನೀಡಿದರು.**

ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಉದ್ಯೋಗ ಮೇಳದ ಆಯೋಜನೆಯ ಪೂರ್ವಬಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಜಿಲ್ಲೆಯಲ್ಲಿ ಯುವನಿಧಿ ಸೌಲಭ್ಯ ಪಡೆಯುತ್ತಿರುವ 15000ಕ್ಕೂ ಹೆಚ್ಚಿನ ಫಲಾನುಭವಿಗಳಿಗೆ ಈ ಉದ್ಯೋಗ ಮೇಳದಲ್ಲಿ ಭಾಗವಹಿಸುವಂತೆ ವಾಟ್ಸಾಪ್ ಹಾಗೂ ಎಸ್.ಎಂ.ಎಸ್ ಮೂಲಕ ಮುಂಚಿತವಾಗಿ ತಿಳಿಸುವ ವ್ಯವಸ್ಥೆ ಮಾಡಿಕೊಳ್ಳಬೇಕು.ಉದ್ಯೋಗ ಮೇಳದಲ್ಲಿ ಭಾಗವಹಿಸುವ ಉದ್ಯೋಗದಾತರು



ನೋಂದಣಿ ಕಾರ್ಯಕ್ಕೆ ಕ್ರಮವಹಿಸಬೇಕು.

ಉದ್ಯೋಗಾಕಾಂಕ್ಷಿಗಳು ಮುಂಚಿತವಾಗಿ ನೋಂದಣಿ ಮಾಡಿಕೊಳ್ಳಲು ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ನೋಂದಣಿಗಾಗಿ ಸೃಜಿಸಲಾದ ಪೋರ್ಟಲ್ ಅಥವಾ ಲಿಂಕ್ ಬಗ್ಗೆ ವ್ಯಾಪಕ ಪ್ರಚಾರಗೊಳಿಸಬೇಕು. ಜಿಲ್ಲಾದಾದ್ಯಂತ ಇರುವ ವಿವಿಧ ಕಾಲೇಜುಗಳಿಗೆ ಮಾಹಿತಿ ನೀಡಬೇಕು ಉದ್ಯೋಗ ಮೇಳದಲ್ಲಿ ಭಾಗವಹಿಸುವ ಉದ್ಯೋಗಾಕಾಂಕ್ಷಿಗಳಿಗೆ ಮುಂಚಿತವಾಗಿ ಹಾಗೂ ಮೇಳದ ದಿನ ನೋಂದಣಿಗೆ ಅವಕಾಶ ಕಲ್ಪಿಸಬೇಕು. ಉದ್ಯೋಗ ಮೇಳದ ಸ್ಥಳ,ವಿಳಾಸ ವಿವರ ಹಾಗೂ ಕೌಂಟ-ರ್ ಸೇರಿದಂತೆ ಅಗತ್ಯ ಮಾಹಿತಿ ನೀಡಬೇಕು, ಉದ್ಯೋಗ ಮೇಳದಲ್ಲಿ ಭಾಗವಹಿಸಲು 130 ಉದ್ಯೋಗದಾತ ಕಂಪನಿಗಳು ಆಗಮಿಸುವ ಸಂಭವವಿರುವ ಹಿನ್ನೆಲೆಯಲ್ಲಿ ಆಯಾ ಕಂಪನಿಯ ಸಂದರ್ಶನ ಕೊಠಡಿ ಸೇರದಂತೆ ಅಗತ್ಯ ವ್ಯವಸ್ಥೆ ಮಾಡಿಕೊಳ್ಳಲು ಸೂಚಿಸಿದರು.

ಈ ಉದ್ಯೋಗ ಮೇಳದಲ್ಲಿ ಭಾಗವಹಿಸುವವ-ರಿಗೆ ನೋಂದಣಿ ಶುಲ್ಕ ಇಲ್ಲದೇ ಇರುವುದರಿಂದ ಹೆಚ್ಚು ಅಭ್ಯರ್ಥಿಗಳು ಭಾಗವಹಿಸುವಂತೆ ನೋಡಿಕೊಳ್ಳಬೇಕು. ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಈ ಬಗ್ಗೆ ಸ್ಥಳೀಯ ಕಸ ವಿಲೇವಾರಿ ವಾಹನ ಮೂಲಕ, ಕರಪತ್ರ, ಬ್ಯಾನರ್ ಹಾಗೂ ಸಾಮಾಜಿಕ ಜಾಲತಾಣಗಳು ಸೇ-ರಿದಂತೆ ವಿವಿಧ ಪ್ರಚಾರ ಮಾಧ್ಯಮದ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು. ಈ ಮೇಳದ ಯಶಸ್ವಿಗೆ ಎಲ್ಲಾ ಅಧಿಕಾರಿಗಳು ಸಮನ್ವಯದಿಂದ ಕಾರ್ಯ ನೀರ್ವಹಿಸಬೇಕು ಉದ್ಯೋಗ ಮೇಳದಲ್ಲಿ ಯಾವುದೇ ಸಮಸ್ಯೆಬಾರದಂತೆ ಸಹಾಯವಾಣಿ ಕೇಂದ್ರ ಸ್ಥಾಪಿಸಿ ಯಾವುದೇ ಗೊಂದಲಗಳಿಗೆ ಪರಿಹಾರ ಸೂಚಿಸುವಚ ವ್ಯವಸ್ಥೆ ಕಲ್ಪಿಸಬೇಕು. ಕಾರ್ಯಕ್ರಮದ ಯಶಸ್ಸಿಗಾಗಿ ವಿವಿಧ ಸಮಿತಿ ಹಾಗೂ ಉಪ ಸಮಿತಿ ರಚಿಸಿದ್ದು ಸಮಿತಿಗೆ ವಹಿಸಿದ ಕಾರ್ಯಗಳನ್ನು ಅತ್ಯಂತ ಜವಾಬ್ದಾ-ರಿಯುತವಾಗಿ ನಿರ್ವಹಿಸುವಂತೆ ಸೂಚನೆ ನೀಡಿದರು.

ಮೇಳದ ಸ್ಥಳದಲ್ಲಿ ಆಗಮನ, ನಿರ್ಗಮನ ನೋಂದಣಿ ಮಾಹಿತಿ ಮಾರ್ಗದರ್ಶನಕ್ಕೆ ಮಳಿಗೆಗಳು ಸ್ಥಾಪಿಸಿ ಯಾವುದೇ ಗೊಂದಲವಾಗದ0ತೆ ನಿರ್ವಹಿಸಿ, ವೇದಿಕೆ ಸಿದ್ದತೆ ಅಗತ್ಯ ವೈದ್ಯಕೀಯ ವ್ಯವಸ್ಥೆ, ಅಂಬುಲೆನ್ಸ, ಅಗ್ನಿ ಶಾಮಕ ವಾಹನ ಸೇರಿದಂತೆ ಎಲ್ಲಾ ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಅವರು ಸೂಚನೆ ನೀಡಿದರು. ಈ ಸಂಧರ್ಭದಲ್ಲಿ ಕೌಶಲ್ಯ ಅಭಿವೃದ್ಧಿ ನಿಗಮದ ಕಾರ್ಯನಿರ್ವಾಹಕ ನಿರ್ದೇಶಕರಾದ ಶ್ವೇತಾ, ಜಿಲ್ಲಾ ಪಂಚಾಯತಿಯ ಉಪ ಕಾರ್ಯದರ್ಶಿ ಪ್ರಕಾಶ ವಡ್ಡರ, ಮಹಾನಗರ ಪಾಲಿಕೆಯ ಆಯುಕ್ತರಾದ ವಿಜಯಕ ಮೆಕ್ಕಳಕಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಬದ್ರುದ್ದಿನ ಸೌದಾಗರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಸಂಪತ್ ಗುಣಾರಿ, ಜಿಲ್ಲಾ ಕಾರ್ಮಿಕ ಅಧಿಕಾರಿಗಳಾದ ಉಮಾಶ್ರೀ ಕೋಳಿ, ಜಿಲ್ಲಾ ಕೌಶಲ್ಯ ಅಭಿವೃದ್ಧಿ ಇಲಾಖೆ ಅಧಿಕಾ-ರಿಗಳಾದ ಮಹಾತೇಂಶ ಬಾಗೇವಾಡಿ ವಿಜಯಪುರ ಜಿಲ್ಲಾ ಕೈಗಾರಿಕೋದ್ಯಮಿಗಳ ಅಸೋಷಿಯೇಶನ್ ಅಧ್ಯಕ್ಷರಾದ ಎಸ್.ವಿ. ಪಾಟೀಲ, ಜಿಲ್ಲಾ ಸಣ್ಣ ಕೈಗಾ-ರಿಕಾಗಳ ಅಧ್ಯಕ್ಷರಾದ ಪೀಟರ್ ಅಲೆಕ್ಸಾಂಡರ್ ಸೇ-ರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಾಹಿತ್ಯ ಸಿಂಚನ

ಸುಗ್ಗಿ ಹಬ್ಬ ಬಂತು ಮಾಡು ಬಾರೊ ಹಿಗ್ಗು ಎಲ್ಲಡೆ ತಂತು
ಕೂಡು ಬಾರೊ (ಪ)

ಹಬ್ಬವಿಲ್ಲದ ಮನೆ ಹೂವಿಲ್ಲ ತೋಟವಂತೆ ತಾವರೆ ಇಲ್ಲದ
ಕೊಳವಂತೆ ಓ ಗೆಳೆಯ ಮಡದಿ ಇಲ್ಲದ ಮನೆಯಂತೆ
(ಚ–1) ಸೂರ್ಯ ಮಕರಕ್ಕೆ ಸಂಕ್ರಮಿಸೊ ಈ ಹಬ್ಬ
ಸಂಕ್ರಾಂತಿಯಂತೆ ನಾಡೊಳಗೆ ಗೆಣೆಕಾರ ಲೋಹರಿ
ಪೊಂಗಲ್ ಅಂತೆ ನಾಡು ಆಚ (ಚ–2)

ಎಳ್ಳು ಬೆಲ್ಲ ಹಂಚಿ ಒಳ್ಳೆ ಮಾತು ಆಡೋಣ ಗೋ ಪೂಜೆ
ಮಾಡಿ ನಲಿಯೋಣ ಕೇಳಣ್ಣ ಹೊಸ ಫಲದ ರುಚಿಂ–
ಯ ಸವಿಯೋಣ (ಚ–3) ಬಣ್ಣಾ ಬಣ್ಣದ ರಂಗೋಲಿ
ಮನೆಮುಂದೆ ಹೆಣ್ಣು ಮಕ್ಕಳೆಲ್ಲ ಹಾಕುತ ಹೊಸ ಬಟ್ಟೆ ಧರಿಸಿ
ದಿನವೆಲ್ಲ ಹಿಗ್ಗುವರು (ಚ–4)

ಹಳ್ಳಿಯ ಜ್ಞಾನಕ್ಕೆ ಹೃದಯವು ತಾ ಉಂಟು ಹೃದಯ
ಸಮುದ್ರ ಆದೀತು ನನ್ನ ಗೆಳೆಯ ಪತಂಗ ಬಾನಿಗೆ ಹಾರೀತು
(ಚ–5) ಹಬ್ಬದ ನೆಪಕ್ಕೆ ಬಂಧು ಬಳಗ ಸೇರೆ ಕಳೆಯು
ಊರಿಗೆ ಹೆಚ್ಚಿತು ಬಾರಯ್ಯ ಜಲ್ಲಿಕಟ್ಟು ಆಟ ನೋಡೋಣ
(ಚ–6)

ಕಾಲವೇ ದೊಡ್ಡ ಗುರುವಂತೆ ಈ ಜಗಕೆ ಭೀಷ್ಮರು
ಉತ್ತರಾಯಣದ ಈ ದಿನಕೆ ಕಾದು ಪ್ರಾಣವನು ಬಿಟ್ಟರಂತೆ

(ಚ–7) ಶಬರಿ ಮಲೆಯಲ್ಲಿ ಮಕರ ಜ್ಯೋತಿ ತಾ ಬೆಳಗುವ
ದಿವ್ಯ ದಿನವಿಂದು ಎಲ್ಲಾರು ಎಳ್ಳು ಹಚ್ಚಿ ಪುಣ್ಯ ಸ್ನಾನ
ಮಾಡೋಣ (ಚ–8)

ತುಳಸಿದಾಸ ಬಿ ಎಸ್

# ಸೊಳ್ಳೆಯಿಂದ ಹರಡುವ ರೋಗಗಳ ತಡೆಗೆ ಜಾಗೃತಿ

## ಸಾರ್ವಜನಿಕರು ಯಾವುದೇ ಜ್ವರವಿರಲಿ, ರಕ್ತಲೇಪನ ಪರೀಕ್ಷೆ ಮಾಡಿಸಿ: ಡಿಎಸ್‌ಓ ಡಾ.ಗಣೇಶ್.ಕೆ

❑ ನೈಜ್ಯ ದೆಸೆ ನ್ಯೂಸ್

**ಲಿಂಗಸುಗೂರು: ಸಾರ್ವಜನಿಕರು ಯಾವುದೇ ಜ್ವರವಿರಲಿ, ಮೊದಲು ರಕ್ತಲೇಪನ ಪರೀಕ್ಷೆ ಮಾಡಿಸಬೇಕು. ಇದರಿಂದ ಮಲೇರಿಯಾ ಸೇರಿದಂತೆ ಸೋಂಕಿತ ಸೊಳ್ಳೆಗಳ ಕಚ್ಚುವಿಕೆಯಿಂದ ಹರಡುವ ರೋಗಗಳ ನಿಯಂತ್ರಣಕ್ಕೆ ಸಾಧ್ಯವಾಗುವುದು ಎಂದು ಜಿಲ್ಲಾ ಸರ್ವೇಕ್ಷಣಾಧಿಕಾರಿ, ಡಾ ಗಣೇಶ ಕೆ, ಜನತೆಗೆ ಮನವಿ ಮಾಡಿದರು.**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಸಹಯೋಗದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮೂಲಕ ಲಿಂಗಸೂಗೂರು ತಾಲೂಕಿನ ಈಚನಾಳ, ಹಂಚಿನಾಳ, ಹಾಲಬಾವಿ ಮುಂತಾದಡೆಯ ದೊಡ್ಡಿಗಳಿಗೆ ಬೇಟಿ ನೀಡಿ ವಾರ್ಷಿಕ ಮಲೇ–ರಿಯಾ ಕಾರ್ಯಚಟುವಟಿಕೆ ಪರೀಶಿಲಿಸಿ ಮಾತನಾಡುತ್ತಾ, ಮನೆಯ ಸುತ್ತಲಿನ ಹೊಲದಲ್ಲಿ, ಕುರುಚಲು ಅಡವಿಯಲ್ಲಿ ಎಲ್ಲಾದರೂ ಶಾಶ್ವತ ನೀರು ನಿಲ್ಲುವ ಸ್ಥಳಗಳಿದ್ದರೆ ಇಲಾಖೆಯ ಗಮನಕ್ಕೆ ತರಲು ಹಾಗೂ ಮನೆಯ ಸುತ್ತಲೂ ನೀರು ನಿಲ್ಲದಂತೆ ಜಾಗೃತಿ ವಹಿಸಿ



ಮುಖ್ಯವಾಗಿ ಮಲೇರಿಯಾ, ಡೆಂಗ್ಯು, ಆನೆಕಾಲು ಮುಂತಾದ ರೋಗ ತಡೆಯಬಹುದಾಗಿದ್ದು, ಮುಖ್ಯವಾಗಿ ಮಲೇರಿಯಾ ಜ್ವರವು ಪ್ಲಾಸ್ಮೋಡಿಯಂ ಎಂಬ ಪರಾವಲಂಭಿ ಸೂಕ್ಷ್ಮಾಣುವಿನಿಂದ ಉಂಟಾಗಬಹುದಾಗಿದ್ದು, ಹೆಣ್ಣು ಅನಾಫಿಲೀಸ್ ಸೊಳ್ಳೆಯ ಕಚ್ಚುವಿಕೆಯಿಂದ ಒಬ್ಬರಿಂದ ಒಬ್ಬರಿಗೆ ಹರಡುತ್ತದೆ.

ಚಳಿ, ನಡುಕ, ಬಿಟ್ಟು ಬಿಟ್ಟು ಜ್ವರ ಬರುವುದು, ವಾಕರಿಕೆ, ಮೈ ಬೆವರುವುದು ಲಕ್ಷಣಗಳು ಕಂಡು ಬಂದಲ್ಲಿ ಮಲೇರಿಯಾ ಜ್ವರ ಇರಬಹುದು ಎಂದು ಭಾವಿಸಿ ಹತ್ತಿರದ ಸರ್ಕಾರಿ ಆಸ್ಪತ್ರೆಯಲ್ಲಿ ರಕ್ತ ಲೇಪನ ಪರೀಕ್ಷೆಗೆ ಒಳಪಟ್ಟು ಖಚಿತಪಟ್ಟಲ್ಲಿ ಸೂಕ್ತ ಉಚಿತ ಚಿಕಿತ್ಸೆ ಪಡೆದು ಗುಣಮುಖರಾಗಬಹುದಾಗಿದೆ ಎಂದು ಹೇಳಿದರು.

ತಾಲೂಕಾ ಆರೋಗ್ಯಾಧಿಕಾರಿ ಡಾ ಅಮರೇಶ್ ಪಾಟೀಲ್ ಮಾಹಿತಿ ನೀಡುತ್ತಾ, ಮಲೇರಿಯಾ ಪ್ರಕರಣಗಳು ಕಂಡು ಬಂದ ಸಂದರ್ಭದಲ್ಲಿ ಮನೆಯ ಸುತ್ತಮುತ್ತಲು ಆರೋಗ್ಯ ಇಲಾಖೆಯಿಂದ ಕೈಗೊಳ್ಳುವ ಕೀಟನಾಶಕ ಸಿಂಪರಣೆಗೆ ಸಾರ್ವಜನಿಕರು ಅವಕಾಶ ಸಹಕರಿಸಬೇಕು.

ಸ್ವಯಂ ರಕ್ಷಣಾ ಕ್ರಮಗಳಾದ ಮಲಗುವಾಗ ಸೊಳ್ಳೆ ಪರದೆ ಬಳಕೆ ಮಾಡಬೇಕು. ಕಿಟಕಿಗಳಿಗೆ ಸೊಳ್ಳೆಗಳು ನುಸುಳದಂತೆ ಜಾಲರಿ ಅಳವಡಿಸುವುದು. ಆರೋಗ್ಯ ಇಲಾಖೆಯಿಂದ ನೀಡಲ್ಪಡುವ ಲಾರ್ವಹಾರಿ ಗಪ್ಪಿ ಮತ್ತು ಗಂಬೂಷಿಯಾ ಮೀನುಗಳನ್ನು ಶಾಶ್ವತವಾಗಿ ನೀರು ನಿಲ್ಲುವ ಸ್ಥಳಗಳಲ್ಲಿ ಬಿಡಲು ಉಚಿತವಾಗಿ ಪಡೆಯಬಹುದಾಗಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ವೈದ್ಯಾಧಿಕಾರಿ ಡಾ ಹನುಮಂತರಾಯ ತಳ್ಳಳ್ಳಿ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಪ್ರಾಣೇಶ್, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಕೆ. ತಾಯಪ್ಪ, ಶರಣಬಸವ ಪಾಟೀಲ, ಬಸವರಾಜ, ಆರೋಗ್ಯ ನಿರೀಕ್ಷಣಾಧಿಕಾರಿ ಅಶೋಕ ಪಾಟೀಲ, ಅಮರೇಶ್, ಜಗದೀಶ್, ಅಲಿ, ಶಿವಕುಮಾರ್, ಪಿಹೆಚ್‌ಸಿಓ ಹುಲಿಗೆಮ್ಮ, ರಾಧಾ, ಮಲ್ಲಮ್ಮ ಸೇರಿದಂತೆ ಸಿಬ್ಬಂದಿಯವರು, ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

# ಎಸ್‌ಎಸ್‌ಎಲ್‌ಸಿಗೆ ಮಕ್ಕಳ ತಯಾರಿ: ಜಿಲ್ಲಾಧಿಕಾರಿ ಕಣ್ಗಾವಲು



❑ ನೈಜ್ಯ ದೆಸೆ ನ್ಯೂಸ್

**ಕೊಪ್ಪಳ: ಜಿಲ್ಲೆಯಲ್ಲಿ ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಯ ಶಿಕ್ಷಣ ವಿವಿಧ ಯೋಜನೆಗಳ ಮೂಲಕ ಕಸರತ್ತು ನಡೆಸುತ್ತಿದ್ದು, ಜಿಲ್ಲಾಧಿಕಾರಿ ಡಾ. ಸುರೇಶ ಇಟ್ನಾಳ ಮಕ್ಕಳ ಓದಿಗೆ ಮೇಲೆ ಕಣ್ಗಾವಲು ಇರಿಸಿದ್ದಾರೆ.**

ಮಂಗಳವಾರ ರಾತ್ರಿ ದಿಢೀರ್ ಆಗಿ ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯಕ್ಕೆ ಭೇಟಿ ನೀಡಿದ ಅವರು ಎಸ್‌ಎಸ್‌ಎಲ್‌ಸಿ ಮಕ್ಕಳ ಕಲಿಕಾ ಸಾಮರ್ಥ್ಯದ ಅಭಿವೃದ್ಧಿಗಾಗಿ ನಡೆಸುತ್ತಿರುವ ಆನ್‌ಲೈನ್ ತರಗತಿಯಲ್ಲಿ ವಿದ್ಯಾರ್ಥಿಗಳೊಂದಿಗೆ ಕುಳಿತು ಅವರು ತರಗತಿಗಳು ಹೇಗೆ ನಡೆಯುತ್ತಿವೆ ಎನ್ನುವುದನ್ನು ವೀಕ್ಷಿಸಿದರು. ನಂತರ ವಿದ್ಯಾರ್ಥಿನಿಯರ ಕುಂದುಕೊರತೆಗಳನ್ನು ವಿಚಾರಿಸಿ ಚೆನ್ನಾಗಿ ಓದಿ ಉತ್ತಮ ಅಂಕಗಳನ್ನು ಗಳಿಸಬೇಕು ಎಂದು ಕಿವಿಮಾತು ಹೇಳಿದರು.

ಅಡುಗೆ ಕೋಣೆಗೆ ತೆರಳಿ ಅಲ್ಲಿ ತರಕಾರಿ ಮತ್ತು ದವಸ ಧಾನ್ಯಗಳ ಪರಿಶೀಲನೆ ನಡೆಸಿ ಮಕ್ಕಳಿಗೆ ಗುಣಮಟ್ಟದ ಆಹಾರವನ್ನು ನಿಯಮಿತವಾಗಿ ನೀಡಬೇಕು. ನಿಗದಿತ ಮೆನು ಪ್ರಕಾರ ಊಟ ಮತ್ತು ಉಪಹಾರ ನೀಡುವುದರ ಜೊತೆಗೆ ವಸತಿ ನಿಲಯದಲ್ಲಿ ಮಕ್ಕಳಿಗೆ ಯಾವುದೇ ಸಮಸ್ಯೆಗಳಾಗದಂತೆ ನೋಡಿಕೊಳ್ಳಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗೆ ಸೂಚನೆ ನೀಡಿದರು. ಶಾಲಾ– ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಸೋಮಶೇಖರಗೌಡ ಪಾಟೀಲ ಹಾಗೂ ವಸತಿ ನಿಲಯದ ಮೇಲ್ವಿಚಾರಕರು ಇದ್ದರು.

## ಅನ್ನದಾನೇಶ್ವರ ಸಂಸ್ಥಾನ ಹಿರೇಮಠದ ಪೀಠಾಧಿಪತಿ ಲಿಂಗೈಕ್ಯ.

❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟೆ: ತಾಲ್ಲೂಕಿನ ಹಿರೂರು ಗ್ರಾಮದಲ್ಲಿರುವ ಅನ್ನದಾನೇಶ್ವರ ಸಂಸ್ಥಾನ ಹಿರೇಮಠವು ಜಾಗತಿಕ ಇತಿಹಾಸದಲ್ಲಿ ತನ್ನ ಅಚ್ಚನ್ನು ಮೂಡಿಸಿದೆ ಕ್ರಿಸ್ತಶಕ 6ನೇ ಶತಮಾನದಲ್ಲಿ ಹಿರೂರ ಗ್ರಾಮವನ್ನು ಕಟ್ಟಿ 330 ವರ್ಷ ಬಾಳಿದ ಕರ್ತೃ ಪುರುಷ ಅನ್ನ ದಾನೇಶ್ವರ ಪ್ರಸಿದ್ಧ ಪವಾಡ ಪುರುಷರು.**



ಈ ಮಠಕ್ಕೆ ಇಲ್ಲಿಯವರೆಗೆ 36 ಜನ ಪೀಠಾಧಿಪತಿಗಳು ಆಗಿ ಹೋಗಿದ್ದಾರೆ. ಈಗಿನ 35ನೇ ಪೀಠಾಧಿಪತಿಗಳಾದ ಶತಾಯುಷಿ ಶತಮಾನದ ಸಂತ ಗುರು ಶಾಂತವೀರ ಶಿವಯೋಗಿ ಶಿವಾಚಾರ್ಯರು 1925 ರಲ್ಲಿ ಜನಿಸಿ ಬಾಲ್ಯವನ್ನು ಹುನಗುಂದ್ ತಾಲೂಕಿನ ವೀರಾಪುರದಲ್ಲಿ ಕಳೆದು ಕೆಲಕಾಲ ಶಿವಯೋಗ ಮಂದಿರ ಮತ್ತು ಇನ್ನುಳಿದ ಧಾರ್ಮಿಕ ಕೇಂದ್ರಗಳಲ್ಲಿ ಅಧ್ಯಯನ ಮಾಡಿ 1945ರಲ್ಲಿ ಸ್ವಾತಂತ್ರ ಸಂಗ್ರಾಮದಲ್ಲಿ ಭಾಗಿಯಾಗಿ 1948ರಲ್ಲಿ ಹಿರೂರು ಮಠದ 35ನೇ ಪೀಠಾಧ್ಯಕ್ಷರಾಗಿ ಸಮಾಜ ಧಾರ್ಮಿಕ ಸೇವೆಯಲ್ಲಿ ತಮ್ಮಣ್ಣ ತೊಡಗಿಸಿಕೊಂಡರು. ಬಡವರ ದೀನದಲಿತ ಭಕ್ತರ ಬಾಳಿಗೆ ಆಶಾಕಿರಣವಾಗಿ ನಂದಾದೀಪವಾಗಿದ್ದರು ಅಖಂಡ 75 ವರ್ಷಗಳ ಕಾಲ ಶ್ರೀಮಠದ ಭಕ್ತರ ಸರ್ವ ಕಾರ್ಯಗಳಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದರು ಲಿಂಗೈಕ್ಯರಾದ ಶ್ರೀಗಳ ಅಂತಿಮ ಕಾರ್ಯ ಜ.16 ರಂದು ಶುಕ್ರವಾರ ಸಕಲ ಸರ್ಕಾರಿ ಗೌರವದೊಂದಿಗೆ ಶ್ರೀಮಠದ ಆವರಣದಲ್ಲಿ ನೆರವೇರುವುದು. ಎಂದು ಶ್ರೀಮಠದ ಪ್ರಕಟಣೆ ತಿಳಿಸಿದೆ.

# ಗಣಿತ, ಇಂಗ್ಲಿಷ್ ಪ್ರಾವೀಣ್ಯತೆ ಅಗತ್ಯ: ಉಪ ವಿಭಾಗಾಧಿಕಾರಿ

❑ ನೈಜ್ಯ ದೆಸೆ ನ್ಯೂಸ್

**ಕುಷ್ಟಗಿ: 'ಗಣಿತ ಮತ್ತು ಇಂಗ್ಲಿಷ್ ಭಾಷೆಯಲ್ಲಿನ ಹೆಚ್ಚಿನ ಪ್ರಾವೀಣ್ಯತೆ ಕೊರತೆ ಕಾರಣದಿಂದ ಈ ಭಾಗದ ಬಹುತೇಕ ವಿದ್ಯಾರ್ಥಿಗಳು ಕೀಳ–ರಿಮೆಯಿಂದ ಬಳಲುವಂತಾಗಿದೆ' ಎಂದು ಉಪ ವಿಭಾಗಾಧಿಕಾರಿ ಕ್ಯಾ.ಮಹೇಶ ಮಾಲಗಿತ್ತಿ ಹೇಳಿದರು. ಇಲ್ಲಿಯ ಎಸ್‌ವಿಸಿ ಶಿಕ್ಷಣ ಸಂಸ್ಥೆಯಲ್ಲಿ ಏರ್ಪಡಿಸಿದ್ದ ವಾರ್ಷಿಕೋತ್ಸವ ಮತ್ತು ಅಭಯೋತ್ಸವ ಉದ್ಘಾಟಿಸಿ ಮಾತನಾಡಿದ ಅವರು, 'ಗಣಿತ ವಿಷಯ ಮತ್ತು ಇಂಗ್ಲೀಷ್ ಭಾಷೆ ಹಾಗೂ ತಂತ್ರಜ್ಞಾನ ಈ ಕಾಲಘಟ್ಟದ ಸಂಕೀರ್ಣ ವಿಷಯಗಳಿಗೆ ಬುನಾದಿಯಾಗಿವೆ.**

ಗ್ರಾಮಾಂತರ ಪ್ರದೇಶದ ವಿದ್ಯಾರ್ಥಿಗಳು ಇವುಗಳಲ್ಲಿ ಪ್ರಭುತ್ವ ಸಾಧಿಸಿದರೆ ಕಲ್ಯಾಣ ಕರ್ನಾಟಕ ಪ್ರದೇಶದ 371ಜೆ ಕಲಂ




ಅನ್ವಯ ಲಭ್ಯವಾಗುವ ಉದ್ಯೋಗಾವಕಾಶಗಳನ್ನು ಪಡೆಯಲು ಸಾಧ್ಯವಾಗುತ್ತದೆ. ಪ್ರಾಥಮಿಕ ಹಂತದಿಂದಲೇ ಗಣಿತ, ಇಂಗ್ಲಿಷ್ ವಿಷಯಗಳಿಗೆ ಹೆಚ್ಚಿನ ಗಮನಹರಿಸುವ ಅಗತ್ಯವಿದೆ' ಎಂದರು. ಅಧ್ಯಕ್ಷತೆ ವಹಿಸಿದ್ದ ಶಿಕ್ಷಣ ಸಂಸ್ಥೆ ಅಧ್ಯಕ್ಷ ಸಿ.ವಿ.ಚಂದ್ರಶೇಖರ ಮಾತನಾಡಿ, 'ಕುಷ್ಟಗಿ ಹಾಗೂ ಸುತ್ತಲಿನ ಹಳ್ಳಿಗಳ ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯವನ್ನು ಗಮನದಲ್ಲಿ–ರಿಸಿಕೊಂಡು ಉಚಿತ ಬಸ್, ಹಾಸ್ಟೆಲ್ ಸೌಲಭ್ಯ ಒದಗಿಸಲಾಗಿದೆ. ಪ್ರತಿಭಾವಂತ ವಿದ್ಯಾರ್ಥಿಗಳನ್ನು ದತ್ತು ಪಡೆದು ಉಚಿತ ಶಿಕ್ಷಣ ನೀಡಲಾಗುತ್ತಿದೆ.

ಈ ಭಾಗದ ವಿದ್ಯಾರ್ಥಿಗಳು ಭವಿಷ್ಯದಲ್ಲಿ ಉನ್ನತ ಸ್ಥಾನ ತಲುಪುವಂತಾಗಬೇಕೆಂಬ ಮಹದಾಸೆ ಶಿಕ್ಷಣ ಸಂಸ್ಥೆಯ ಧ್ಯೇಯಗಳಲ್ಲಿ ಒಂದಾಗಿದೆ' ಎಂದು ಹೇಳಿದರು. ಕೊಪ್ಪಳ ವಿಶ್ವವಿದ್ಯಾಲಯದ ಪ್ರಭಾರ ಕುಲಪತಿ ಪ್ರೊ.ಎಸ್.ವಿ.ಡಾಣಿ, ಶಿಕ್ಷಣ ಸಂಸ್ಥೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜಗದೀಶ ಅಂಗಡಿ ಇತರರು ಕಾರ್ಯಕ್ರಮ ಕುರಿತು ಮಾತನಾಡಿದರು. ಕೇಂದ್ರ ಮತ್ತು ರಾಜ್ಯ ಪಠ್ಯಕ್ರಮದ ಹಾಗೂ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ಎರಡು ದಿನಗಳ ವರೆಗೆ ನಡೆದ ಕಾರ್ಯಕ್ರಮದಲ್ಲಿ ಪ್ರದರ್ಶಿಸಿದ ಸಾಂಸ್ಕೃತಿ–ಕ ಕಾರ್ಯಕ್ರಮಗಳು ಜನರ ಗಮನಸೆಳೆದವು. ವಿದ್ಯಾರ್ಥಿಗಳು, ಕಾಲೇಜಿನ ಸಿಬ್ಬಂದಿ ಹಾಗೂ ಪಾಲಕರು, ಪೋಷಕರು ಹಾಜರಿದ್ದರು.

## ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷರಾದ ಅಪ್ಪಾಜಿ ನಾಡಗೌಡರನ್ನು ಗ್ರಾಮಸ್ಥರಿಂದ ಸನ್ಮಾನ

❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ತಾಲೂಕಿನ ಬಳಗಾನೂರ ಗ್ರಾಮದಲ್ಲಿ ಗುರುವಾರ ನಡೆದ ರಸ್ತೆ ಅಭಿವೃದ್ಧಿ ಭೂಮಿ ಪೂಜೆ ಸಮಾರಂಭದಲ್ಲಿ ಶಾಸಕ,ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷರಾದ ಅಪ್ಪಾಜಿ ನಾಡಗೌಡರನ್ನು ಗ್ರಾಮಸ್ಥರು ಸನ್ಮಾನಿಸಿ ಗೌರವಿಸಿದರು.**



ಗಣ್ಯರಾದ ನಿಂಗನಗೌಡ ಪಾಟೀಲ, ಸಿ.ಬಿ.ಅಸ್ಕಿ, ನಿವೃತ್ತ ಶಿಕ್ಷಕ ಹೂಗಾರ, ಬಸನಗೌಡ ಬಗಲಿ, ಪ್ರಭುಗೌಡ ಮದರಕಲ್ಲ, ಮಲ್ಲಣ್ಣ ದೋರನಹಳ್ಳಿ,ಚೆನ್ನಣ್ಣ ಅಲದಿ, ಶಿವಣ್ಣ ಕಡಕೋಳ, ಸಂಗನಗೌಡ ಅಸ್ಕಿ ಇದ್ದರು.

## ಪರಮಪೂಜ್ಯ ಶ್ರೀ ಸಿದ್ದರಾಮಾನಂದಪುರಿ ಮಹಾಸ್ವಾಮಿಗಳಿಗೆ ಸರ್ಕಾರಿ ಗೌರವಗಳೊಂದಿಗೆ ಅಂತ್ಯಕ್ರಿಯೆ



❑ ನೈಜ್ಯ ದೆಸೆ ನ್ಯೂಸ್

**ಕಲಬುರ್ಗಿ: ತಿಂಥಣಿ ಬ್ರಿಜ್: ಶ್ರೀ ಕಾಗಿನೆಲೆ ಮಹಾಸಂಸ್ಥಾನ ಕನಕಗುರುಪೀಠ ಶಾಖಾ ಮಠ, ತಿಂಥಣಿ ಬ್ರಿಜ್ ಕಲಬುರ್ಗಿ ವಿಭಾಗೀಯ ಪೀಠದ ಪರಮಪೂಜ್ಯ ಶ್ರೀ ಸಿದ್ದರಾಮಾನಂದಪುರಿ ಮಹಾಸ್ವಾಮಿಗಳ ಅಂತ್ಯಕ್ರಿಯೆಯು ಇಂದು ಭಕ್ತಿಭಾವ ಹಾಗೂ ಸರ್ಕಾರಿ ಗೌರವಗಳೊಂದಿಗೆ ನೆರವೇರಿತು.**

ರಾಜ್ಯ ಸರ್ಕಾರದ ಪರವಾಗಿ ನಗರಾಭಿವೃದ್ಧಿ ಸಚಿವರಾದ ಶ್ರೀ ಬೈರತಿ ಸುರೇಶ್ ಅವರು ಅಂತ್ಯಕ್ರಿಯೆಯಲ್ಲಿ ಭಾಗವಹಿಸಿ ವಿಧಿವಿಧಾನಗಳ ಉಸ್ತುವಾರಿಯನ್ನು ವಹಿಸಿದರು. ಈ ಸಂದರ್ಭದಲ್ಲಿ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು, ವಿಧಾನ ಪರಿಷತ್ತಿನ ಸಭಾ ನಾಯಕರು ಹಾಗೂ ಕೊಡಗು ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಎನ್.ಎಸ್. ಬೋಸುರಾಜು ಜೀ, ಗ್ಯಾರಂಟಿ ಯೋಜನೆಗಳ ರಾಜ್ಯಾಧ್ಯಕ್ಷರಾದ ಶ್ರೀ ಎಚ್.ಎಂ. ರೇವಣ್ಣ , ಮಾಜಿ ಸಂಸದರಾದ ಕೆ ವಿರುಪಾಕ್ಷಪ್ಪ, ಎಂಎಲ್ಸಿ ಬಸವನಗೌಡ ಬಾದರ್ಲಿ, ಅವರು ಉಪಸ್ಥಿತರಿದ್ದು, ಪೂಜ್ಯ ಶ್ರೀಗಳ ಅಂತಿಮ ದರ್ಶನ ಪಡೆದು ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಿದರು.

ಪೂಜ್ಯ ಶ್ರೀಗಳ ಅಂತ್ಯಕ್ರಿಯೆಯನ್ನು ಸಂಪೂರ್ಣವಾಗಿ ಸರ್ಕಾರಿ ಗೌರವಗಳೊಂದಿಗೆ ನೆರವೇರಿಸಲಾಗಿದ್ದು, ಪೊಲೀಸ್ ಪಡೆ ಕುಶಾಲುತೋಪು ಹಾರಿಸಿ ಶ್ರೀಗಳಿಗೆ ಅಂತಿಮ ನಮನ ಸಲ್ಲಿಸಿತು. ಪರಮಪೂಜ್ಯ ಶ್ರೀ ಸಿದ್ದರಾಮಾನಂದಪುರಿ ಮಹಾಸ್ವಾಮಿಗಳು ಸಮಾಜ ಸೇವೆಗೆ ಅಪ್ರತಿಮ ಕೊಡುಗೆ ನೀಡಿದ ಮಹಾನ್ ಸಂತರು. ಶಿಕ್ಷಣ, ಆರೋಗ್ಯ ಹಾಗೂ ಸಾಮಾಜಿಕ ಅಭಿವೃದ್ಧಿ ಕ್ಷೇತ್ರಗಳಲ್ಲಿ ಅವರು ಮಾಡಿದ ಸೇವೆ ಲಕ್ಷಾಂತರ ಜನರ ಬದುಕನ್ನು ಸ್ಪರ್ಶಿಸಿದೆ. ಅವರ ಜೀವನವು ಸಮರ್ಪಣೆ, ತ್ಯಾಗ ಮತ್ತು ಮಾನವೀಯ ಮೌಲ್ಯಗಳಿಗೆ ಅತ್ಯುನ್ನತ ಉದಾಹರಣೆಯಾಗಿದೆ ಎಂದು ಶ್ರದ್ಧಾಂಜಲಿ ಸಲ್ಲಿಸಿದ ಗಣ್ಯರು ಸ್ಮರಿಸಿದರು.

# ಕ್ಷೇತ್ರದ ಜನರ ಪ್ರೀತಿ ವಿಶ್ವಾಸಕ್ಕೆ ಚಿರಋಣಿ: ಶಾಸಕ ನಾಡಗೌಡ

❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಮತಕ್ಷೇತ್ರದ ವಿವಿಧ ಅಭಿವೃದ್ಧಿ ಕೆಲಸಗಳಿಗಾಗಿ ಕಳೆದ ಎರಡು ವರ್ಷಗಳಲ್ಲಿ ರೂ.200 ಕೋಟಿಗಿಂತಲೂ ಹೆಚ್ಚು ಅನುದಾನವನ್ನು ತಂದು ಕೆಲಸ ಮಾಡುತ್ತಿದ್ದೇನೆ. ಕೆಲವರು ಕೇವಲ ರಾಜ–ಕಾರಣಕ್ಕಾಗಿ ಅನುದಾನದ ಕೊರತೆಯಿಂದಾಗಿ ಅಭಿವೃದ್ಧಿ ಕಾರ್ಯಗಳು ನಿಂತು ಹೋಗಿವೆ ಎಂಬ ಸುಳ್ಳು ಆರೋಪ ಮಾಡುತ್ತಿದ್ದಾರೆ ಇಂಥ–'ವರ ಮಾತುಗಳನ್ನು ನೀವು ನಂಬಬೇಡಿ ಎಂದು ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ,ಶಾಸಕ ಸಿ.ಎಸ್.ನಾಡಗೌಡ ಅಪ್ಪಾಜಿ ಹೇಳಿದರು.**

ಗುರುವಾರ ತಾಲೂಕಿನ ಬಳಗಾನೂರ ಗ್ರಾಮದಲ್ಲಿ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ 2022–23ನೇ ಸಾಲಿನ ಮುಖ್ಯಮಂತ್ರಿಗಳ ವಿಶೇಷ ಅಭಿವೃದ್ಧಿ ಯೋಜನೆಯ ರೂ.210 ಲಕ್ಷ ಮೊತ್ತದ ಬಳಗಾನೂರದಿಂದ ಕೊಣ್ಣೂರ(ಕ್ಯಾನಲ್) ವರೆಗೆ ರಸ್ತೆ ಸುಧಾರಣೆ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು. ಇದು ಹಿಂದಿನ ಅವಧಿಯಲ್ಲಿ ಆಗಬೇಕಾದ ಕಾಮಗಾರಿ ಅನುದಾನ ಇಲ್ಲದೆ ಇರುವುದರಿಂದ ಬಹಳಷ್ಟು ವಿಳಂಬವಾಗಿದ್ದು ಇದೀಗ ಅನುದಾನವನ್ನು ಮಂಜೂರು ಮಾಡಿಸಿಕೊಂಡು ಚಾಲನೆ ಕೊಟ್ಟಿದ್ದೇನೆ, ಕ್ಷೇತ್ರದಲ್ಲಿ ಹಿಂದಿನ ಅವಧಿಯ ಇಂತಹ 9 ಕಾಮಗಾರಿಗಳು ಇವೆ ನಾನು ಅವುಗಳನ್ನು ರದ್ದುಗೊಳಿಸದೆ ಮುಂದುವರಿಸಿದ್ದೇನೆ ಅಭಿವೃದ್ಧಿ ಕಾರ್ಯಗಳು ಯಾರೇ ಮಾಡಿದರು ಅದನ್ನು ನಾನು ವಿರೋಧಿಸುವುದಿಲ್ಲ ಅಭಿವೃದ್ಧಿಯಲ್ಲಿ ರಾಜಕಾರಣ ನನಗೆ ಬೇಕಾಗಿಲ್ಲ ರಾಜಕಾರಣ ಚುನಾವಣೆಗೆ ಮಾತ್ರ ಸೀಮಿತವಾಗಿರಬೇಕೆಂಬುದು ನನ್ನ ಧೋರಣೆಯಾಗಿದೆ.

ಬಳಗಾನೂರದಿಂದ ಮಿಣಜಗಿ ಕೂಡು ರಸ್ತೆ ಅಭಿವೃದ್ಧಿಯ ಅಗತ್ಯವಿದ್ದು ಇದಕ್ಕಾಗಿ ಈಗಾಗಲೇ ರೂ.2 ಕೋಟಿ ಕಾಯ್ದಿರಿಸಿದ್ದು ಟೆಂಡರ್ ಹಂತದಲ್ಲಿದೆ ಆದಷ್ಟು ಬೇಗ ಆರಂಭಿಸಲಾಗುವುದು.




ಕ್ಷೇತ್ರದ ಜನರ ಸಾಕಷ್ಟು ಬೇಡಿಕೆಗಳಿವೆ ಆದರೆ ಎಲ್ಲಾ ಕೆಲಸಗಳನ್ನು ಹಂತ ಹಂತವಾಗಿ ಮಾಡಲಾಗುವುದು ಇದಕ್ಕೆ ನಿಮ್ಮೆಲ್ಲರ ಸಹಕಾರ ನನಗೆ ಬೇಕು ಎಂದರು. ಕಾಂಗ್ರೆಸ್ ಮುಖಂಡ ಸಿ.ಬಿ.ಅಸ್ಕಿ ಪ್ರಾಸ್ತಾವಿಕವಾಗಿ ಮಾತನಾಡಿ ಶಾಸಕ ಅಪ್ಪಾಜಿ ನಾಡಗೌಡರು ಮಾತು ಕಡಿಮೆ ಕೆಲಸ ಹೆಚ್ಚು ಎಂಬ ಮಾತಿನಲ್ಲಿ ವಿಶ್ವಾಸ ಇಟ್ಟಂತವರು, ದ್ವೇಷ ರಾಜಕಾರಣ ಮಾಡದ ಪ್ರಚಾರ ಬಯಸದ ವ್ಯಕ್ತಿಗಳಾಗಿದ್ದಾರೆ ಬೇರೆಯವರಂತೆ ಸುಳ್ಳು ಆಶ್ವಾಸನೆಗಳನ್ನು ಅವರು ಕೊಡುವುದಿಲ್ಲ ಕೊಟ್ಟ ಮಾತಿನಂತೆ ಅವರು ನಡೆದುಕೊಳ್ಳುತ್ತಾರೆ ಈಗಾಗಲೇ ಕ್ಷೇತ್ರದಲ್ಲಿ 200 ಕೋಟಿಯಷ್ಟು ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿವೆ ಇದರ ಸಂಪೂರ್ಣ ಮಾಹಿತಿಯನ್ನು ನಾನು ಕೊಡಬಲ್ಲೆ, ಸುಳ್ಳು ಹೇಳುವರನ್ನು ನಂಬದೇ ಶಾಸಕರೊಂದಿಗೆ ನಾವೆಲ್ಲರೂ ಸಹಕರಿಸೋಣ ಎಂದರು.

ಇದೇ ಸಂದರ್ಭದಲ್ಲಿ ಶಾಸಕ ಅಪ್ಪಾಜಿ ನಾಡಗೌಡರನ್ನು ಗ್ರಾಮಸ್ಥರಿಂದ ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ವೇ. ಮೂ. ಶಾಂತಯ್ಯ ಹಿರೇಮಠ, ಮುಖಂಡರಾದ ನಿಂಗನಗೌಡ ಪಾಟೀಲ, ಪ್ರಭುಗೌಡ ಮದರಕಲ್ಲ, ಶಿವಣ್ಣ ಕಡಕೋಳ, ಬಸನಗೌಡ ಬಗಲಿ,ಮಲ್ಲಣ್ಣ ದೋರನಹಳ್ಳಿ,ಚೆನ್ನಣ್ಣ ಅಲದಿ, ನಿವೃತ್ತ ಶಿಕ್ಷಕ ಹೂಗಾರ, ಪಿಕೆಪಿಎಸ್ ಅಧ್ಯಕ್ಷ ನೀಲಪ್ಪ ನರಸಣಗಿ, ಮಲ್ಲನಗೌಡ ಬಿರಾದಾರ, ಸಂಗನಗೌಡ ಅಸ್ಕಿ, ಗುತ್ತಿಗೆದಾರ ಬಿಎಸ್ ಪಾಟೀಲ (ವಣಕಿಹಾಳ), ಎಇಇ ಜ್ಞಾನೇಶ ಮುರಾಳ ಹಾಗೂ ಗ್ರಾಮಸ್ಥರು ಇದ್ದರು.

## ನೇಮಕಾತಿ ಪ್ರಕಟಣೆ

HAL ಇಂಡಿಯಾ ನೇಮಕಾತಿ 2026–62 ಅಪ್ರೆಂಟಿಸ್ ಹುದ್ದೆಗಳಿಗೆ ವಾಕ್–ಇನ್ ಸಂದರ್ಶನ HAL ಇಂಡಿಯಾ ನೇಮಕಾತಿ 2026: 62 ಅಪ್ರೆಂಟಿಸ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಹಿಂದೂಸ್ತಾನ್ ಏರೋನಾಟಿ–ಕ್ಸ್ ಲಿಮಿಟೆಡ್ ಜನವರಿ 2026 ರ HAL ಇಂಡಿ–ಯಾ ಅಧಿಕೃತ ಅಧಿಸೂಚನೆಯ ಮೂಲಕ ಅಪ್ರೆಂಟಿಸ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕೋಲ್ಕತ್ತಾ – ಪಶ್ಚಿಮ ಬಂಗಾಳ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 30–ಜನವರಿ–2026 ರಂದು ವಾಕ್–ಇನ್–ಇಂಟರ್ವ್ಯೂಗೆ ಹಾಜರಾಗಬಹುದು.

ಅಧಿಸೂಚನೆ ಬಿಡುಗಡೆ ದಿನಾಂಕ: 13–01–2026

ವಾಕ್–ಇನ್ ದಿನಾಂಕ: 30–ಜನವರಿ–2026

ಅಧಿಕೃತ ವೆಬ್‌ಸೈಟ್: hal-india.co.in

# ಸಿಂಧನೂರಿನ ವಿದ್ಯಾ ಪಬ್ಲಿಕ್ ಶಾಲೆಯಲ್ಲಿ ಸಂಕ್ರಾಂತಿ ಸಂಭ್ರಮ ಕಾರ್ಯಕ್ರಮ

❑ ನೈಜ್ಯ ದೆಸೆ ನ್ಯೂಸ್

**ಸಿಂಧನೂರಿನ: ವಿದ್ಯಾ ಪಬ್ಲಿಕ್ ಶಾಲೆಯಲ್ಲಿ ಸಂಕ್ರಾಂತಿ ಸಂಭ್ರಮ ಕಾರ್ಯಕ್ರಮವನ್ನು ಸಂಭ್ರಮ, ಸಂಸ್ಕೃತಿ ಹಾಗೂ ಪರಂಪರೆಯ ಸಂಗಮದೊಂದಿಗೆ ವಿಜೃಂಭಣೆಯಿಂದ ಆಚ–ರಿಸಲಾಯಿತು. ಭಾರತೀಯ ಸಂಸ್ಕೃತಿಯ ಪ್ರಮುಖ ಹಬ್ಬವಾದ ಸಂಕ್ರಾಂತಿ ಹಬ್ಬದ ಮಹತ್ವವನ್ನು ವಿದ್ಯಾರ್ಥಿಗಳಿಗೆ ಪರಿಚಯಿಸುವ ಉದ್ದೇಶದಿಂದ ಆಯೋಜಿಸಲಾದ ಈ ಕಾರ್ಯಕ್ರಮವು ಅತ್ಯಂತ ಅರ್ಥಪೂರ್ಣವಾಗಿ ನಡೆಯಿತು.**

ಕಾರ್ಯಕ್ರಮದಲ್ಲಿ ಭಾಗವಹಿಸಿದ ಪೂಜ್ಯ ಸ್ವಾಮೀಜಿಯವರು ಸಂಕ್ರಾಂತಿ ಹಬ್ಬದ ವೈಶಿಷ್ಟ್ಯ, ಕೃಷಿ ಜೀವನದೊಂದಿಗೆ ಅದರ ಅವಿನಾಭಾವ ಸಂಬಂಧ, ಸೂರ್ಯಾರಾಧನೆಯ ಮಹತ್ವ ಹಾಗೂ ಪರಸ್ಪರ ಪ್ರೀತಿ, ಸಹಕಾರ ಮತ್ತು ಸೌಹಾರ್ದತೆಯ ಸಂದೇಶವನ್ನು ವಿದ್ಯಾರ್ಥಿಗಳಿಗೆ ಸರಳ, ಸ್ಪಷ್ಟ ಹಾಗೂ ಮನಮುಟ್ಟುವ ಶೈಲಿಯಲ್ಲಿ ವಿವರಿಸಿದರು. ಹಬ್ಬಗಳು ಸಮಾಜದಲ್ಲಿ



ಏಕತೆ, ಸಹಬಾಳ್ವೆ ಮತ್ತು ಮಾನವೀಯ ಮೌಲ್ಯಗಳನ್ನು ಬೆಳೆಸುವ ಮಹತ್ವದ ಸಾಧನಗಳಾಗಿವೆ ಎಂದು ಅವರು ಹೇಳಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಮುಖ್ಯಸ್ಥರಾದ ವೈ. ನರೇಂದ್ರನಾಥ್ ಅವರು ಮಾತನಾಡಿ, ಮಕ್ಕಳಲ್ಲಿ ನಮ್ಮ ಸಂಸ್ಕೃತಿ, ಪರಂಪರೆ ಹಾಗೂ ನೈತಿಕ ಮೌಲ್ಯಗಳ ಅರಿವು ಮೂಡಿಸುವುದು ಶಿಕ್ಷಣದ ಮೂಲ ಉದ್ದೇಶವಾಗಬೇಕು ಎಂದು ತಿಳಿಸಿದರು.

ಶಾಲಾ ಹಂತದಲ್ಲಿಯೇ ಹಬ್ಬಗಳ ಮಹತ್ವವನ್ನು ತಿಳಿಸುವುದರಿಂದ ಮಕ್ಕಳಲ್ಲಿ ಸಂಸ್ಕಾರ ಮತ್ತು ಸಂಪ್ರದಾಯಗಳ ಮೇಲೆ ಗೌರವ ಹೆಚ್ಚುತ್ತದೆ ಎಂದು ಅವರು ಹೇಳಿದರು. ಮುಖ್ಯೋಪಾಧ್ಯಾಯರು ಮಾತನಾಡಿ, ಸಂಕ್ರಾಂತಿ ಹಬ್ಬವು ಶಿಸ್ತು, ಸಹಕಾರ, ಹಂಚಿಕೆ ಹಾಗೂ ಪರಸ್ಪರ ಗೌರವದ ಪಾಠವನ್ನು ಕಲಿಸುತ್ತದೆ. ಇಂತಹ ಕಾರ್ಯಕ್ರಮಗಳು ಮಕ್ಕಳ ಸಮಗ್ರ ವ್ಯಕ್ತಿತ್ವ ವಿಕಾಸಕ್ಕೆ ಸಹಕಾ–ರಿಯಾಗುತ್ತವೆ ಎಂದು ಅಭಿಪ್ರಾಯಪಟ್ಟರು. ಕಾರ್ಯಕ್ರಮದಲ್ಲಿ ಶಿಕ್ಷಕರು, ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿನಿಯರು ಉತ್ಸಾಹದಿಂದ ಪಾಲ್ಗೊಂಡು ಸಂಭ್ರಮವನ್ನು ಇನ್ನಷ್ಟು ವೈಭವಮಯಗೊಳಿಸಿದರು.

ಸಂಪ್ರದಾಯಬದ್ಧ ಅಲಂಕಾರ, ಹಬ್ಬದ ವಾತಾವರಣ ಹಾಗೂ ಮಕ್ಕಳ ಸಂಭ್ರಮವು ಕಾರ್ಯಕ್ರಮಕ್ಕೆ ವಿಶೇಷ ಶೋಭೆ ತಂದಿತು. ಈ ಸಂಕ್ರಾಂತಿ ಸಂಭ್ರಮ ಕಾರ್ಯಕ್ರಮವು ವಿದ್ಯಾರ್ಥಿಗಳಲ್ಲಿ ಭಾರತೀಯ ಸಂಸ್ಕೃತಿ, ಸಂಸ್ಕಾರ, ಶ್ರದ್ಧೆ ಮತ್ತು ಪರಂಪರೆಯ ಬಗ್ಗೆ ಅರಿವು ಮೂಡಿಸುವಲ್ಲಿ ಯಶಸ್ವಿಯಾಯಿತು. ಈ ಕಾರ್ಯಕ್ರಮದಲ್ಲಿ ಸಂಸ್ಥೆಯ ಮುಖ್ಯಸ್ಥರಾದ ವೈ ನರೇಂದ್ರನಾಥ್, ಮುಖ್ಯೋಪಾಧ್ಯಾಯರು ಶಾಲೆಯ ಶಿಕ್ಷಕರು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಕನಕಗುರು ಪೀಠದ ಸಿದ್ದರಾಮನಂದ ಸ್ವಾಮೀಜಿ ಅಂತಿಮ ದರ್ಶನಕ್ಕೆ ಅಪಾರ ಸಂಖ್ಯೆಯ ಭಕ್ತರು

❑ ನೈಜ್ಯ ದೆಸೆ ನ್ಯೂಸ್

**ದೇವದುರ್ಗ ತಾಲ್ಲೂಕಿನ ತಿಂಥಣಿ ಬ್ರಿಜ್ಡ್ ಕಾಗಿನೆಲೆ ಕನಕ ಗುರುಪೀಠದ ಸಿದ್ದರಾಮನಂದ ಸ್ವಾಮೀಜಿ ಅವರ ಪಾರ್ಥಿವ ಶರೀರದ ಅಂತಿಮ ದರ್ಶನಕ್ಕೆ ಅಪಾರ ಸಂಖ್ಯೆಯಲ್ಲಿ ಭಕ್ತರು ಬರುತ್ತಿದ್ದಾರೆ. ಮಠದ ಆವರಣದಲ್ಲಿ ಸಾರ್ವಜನಿಕ ದರ್ಶನಕ್ಕೆ ಪಾರ್ಥಿವ ಶರೀರ ಇಡಲಾಗಿದೆ.**



ತಿಂಥಣಿಯ ಕನಕ ಗುರು ಪೀಠದಲ್ಲಿಯೇ ಹಾಲುಮತದ ಪದ್ಧತಿಯಂತೆ ಸಂಜೆ 5 ಗಂಟೆಗೆ ಅಂತ್ಯಕ್ರಿಯೆ ನಡೆಯಲಿದೆ. ಭಕ್ತರನ್ನು ನಿಯಂತ್ರಿಸಲು ಭಾರಿ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ. ಸಂಜೆ ಜಿಲ್ಲೆಯ ಸಚಿವರು, ಶಾಸಕರು, ವಿಧಾನ ಪರಿಷತ್ ಸದಸ್ಯರು ಪಾಲ್ಗೊಳ್ಳಲಿದ್ದಾರೆ.ಜಿಲ್ಲೆಯಲ್ಲಿ ಇಂದು ನಾಳೆ ನಡೆಯಬೇಕಿದ್ದ ಸರ್ಕಾರಿ ಸಭೆ ಸಮಾರಂಭಗಳನ್ನು ರದ್ದುಗೊಳಿಸಲಾಗಿದೆ.

# ಕಾರಟಗಿ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಅಕ್ರಮ ಮದ್ಯ ಮಾರಾಟಕ್ಕೆ ಸಾರ್ವಜನಿಕರಿಂದ ಸ್ವಯಂಪ್ರೇರಿತ ತಡೆ



❑ ನೈಜ್ಯ ದೆಸೆ ನ್ಯೂಸ್

**ಕಾರಟಗಿ: ತಾಲೂಕು ಬೆನ್ನೂರು ಗ್ರಾಮದಲ್ಲಿ ಪ್ರಾರಂಭವಾದ ಅಕ್ರಮ ಮದ್ಯ ಮಾರಾಟ ನಿಷೇಧ ಕ್ರಮವು ಇದೀಗ ಮಾದ–ರಿಯಾಗಿ ಬೆಳೆಯುತ್ತಿದೆ. ಬೆನ್ನೂರು ಗ್ರಾಮದಲ್ಲಿ ಸಾರ್ವಜನಿಕರು ತಮಗೆ ತಾವೇ ಎಚ್ಚೆತ್ತುಕೊಂಡು ಅಕ್ರಮ ಮದ್ಯ ಮಾರಾಟಕ್ಕೆ ಸಂಪೂರ್ಣ ತಡೆ ವಿಧಿಸಿರುವುದು ಗಮನಾರ್ಹ ಬೆಳವಣಿಗೆಯಾಗಿದೆ.**

ಈ ಯಶಸ್ವಿ ಪ್ರಯತ್ನದಿಂದ ಪ್ರೇ–ರಿತರಾಗಿ, ಕಾರಟಗಿ ತಾಲೂಕಿನ ಕುಂಟೋಜಿ ಹಾಗೂ ಈಳಿಗನೂರು ಗ್ರಾಮಗಳಲ್ಲಿಯೂ, ಜೊತೆಗೆ ಗಂಗಾವತಿ ತಾಲೂಕಿನ ಡಾನಾಪುರ ಗ್ರಾಮದಲ್ಲಿಯೂ ಸಾರ್ವಜನಿಕರು ಒಗ್ಗಟ್ಟಾಗಿ



**ಕಾರಟಗಿ ತಾಲೂಕಿನ ಬೆನ್ನೂರು ಇಳಿಗನೂರು ಕುಂಟೋಜಿ ಮತ್ತು ಗಂಗಾವತಿ ತಾಲೂಕಿನ ಡಾನಾಪುರ ಗ್ರಾಮಸ್ಥರ ಈ ಅಕ್ರಮ ಮದ್ಯ ಮಾರಾಟ ನಿಷೇಧ ಕ್ರಮ ಇಡೀ ರಾಜ್ಯಕ್ಕೆ ಮಾದರಿಯಾಗಿದೆ ಅಕ್ರಮ ಮದ್ಯ ಮಾರಾಟ ನಿರ್ಮೂಲನೆಗೆ ಜನ ಸಹಭಾಗಿ–ತ್ವವೇ ಅತ್ಯಂತ ಪರಿಣಾಮಕಾರಿ ಮಾರ್ಗ ಯುವ ಸಮುದಾಯಕ್ಕೆ ದುಷ್ಪರಿಣಾಮ ಬೀರುತ್ತಿದ್ದ ಅಕ್ರಮ ಮದ್ಯ ಮಾರಾಟ ನಿಷೇಧ ಸಾರ್ವಜನಿಕರ ತೀರ್ಮಾನ ಹರ್ಷ ತಂದಿದೆ ಸಾಬೀತಾಗಿದೆ. ಶರಣಪ್ಪ ನಂದಿಹಳ್ಳಿ ಯುವ ಮುಖಂಡರು ಬೆನ್ನೂರು**

ಅಕ್ರಮ ಮದ್ಯ ಮಾರಾಟವನ್ನು ನಿಷೇಧಿಸುವ ನಿರ್ಧಾರ ಕೈಗೊಂಡಿದ್ದಾರೆ. ಗ್ರಾಮಸ್ಥರು ಸಭೆ ನಡೆಸಿ, ಅಕ್ರಮ ಮದ್ಯ ಮಾರಾಟವು ಸಮಾಜದ ಆರೋಗ್ಯ, ಕುಟುಂಬಗಳ ಶಾಂತಿ ಮತ್ತು ಯುವಜನರ ಭವಿಷ್ಯಕ್ಕೆ ಹಾನಿಕಾರಕವಾಗಿರುವುದನ್ನು ಚರ್ಚಿಸಿ, ಇದಕ್ಕೆ ಸಂಪೂರ್ಣ ತಡೆ ಹಾಕಬೇಕೆಂದು ಒಮ್ಮತದ ತೀರ್ಮಾನ ಕೈಗೊಂಡಿದ್ದಾರೆ. ಗ್ರಾಮದ ಹಿರಿಯರು, ಮುಖಂಡರು ಹಾಗೂ ಸಾರ್ವಜನಿಕರು ಸೇರಿ ಅಕ್ರಮ ಮದ್ಯ ಮಾರಾಟ ನಡೆಸುವವರಿಗೆ ಎಚ್ಚರಿಕೆ ನೀಡಲಾಗಿದ್ದು, ಮುಂದಿನ ದಿನಗಳಲ್ಲಿ ಯಾವುದೇ ರೀತಿಯ ಅಕ್ರಮ ಮದ್ಯ ಮಾರಾಟಕ್ಕೆ ಅವಕಾಶ ನೀಡುವುದಿಲ್ಲವೆಂದು ಸ್ಪಷ್ಟ ಸಂದೇಶ ನೀಡಿದ್ದಾರೆ.

ಈ ಕ್ರಮದಿಂದ ಗ್ರಾಮಗಳಲ್ಲಿ ಶಾಂತಿ, ಸೌಹಾರ್ದತೆ ಮತ್ತು ಸಾಮಾಜಿಕ ಜವಾಬ್ದಾ–ರಿಯ ಮನೋಭಾವ ಮತ್ತಷ್ಟು ಬಲಪಡಿಸಿದೆ. ಸಾರ್ವಜನಿಕರ ಈ ಸ್ವಯಂಪ್ರೇರಿತ ನಡೆ ಇತರ ಗ್ರಾಮಗಳಿಗೆ ಸಹ ಮಾದರಿಯಾಗಿದ್ದು, ಅಕ್ರಮ ಮದ್ಯ ಮಾರಾಟ ನಿರ್ಮೂಲನೆಗೆ ಜನಸಹಭಾಗಿತ್ವವೇ ಅತ್ಯಂತ ಪರಿಣಾಮಕಾರಿ ಮಾರ್ಗ ಎಂಬುದನ್ನು ಸಾಬೀತುಪಡಿಸಿದೆ.

## ಕರ್ನಾಟಕದಲ್ಲಿ ಕಡಿಮೆಯಾದ ಚಳಿ ಅಬ್ಬರ

❑ ನೈಜ್ಯ ದೆಸೆ ನ್ಯೂಸ್

**ಕರಾವಳಿ ಭಾಗದಲ್ಲಿ ಚಂಡಮಾರುತದ ಪರಿಣಾಮ ರಾಜ್ಯದ ಹಲವು ಕಡೆ ಮಳೆರಾಯ ಅಬ್ಬರಿಸಿದ್ದು, ಚಳಿ ಕಡಿಮೆಯಾಗಿ ಶೀತಗಾಳಿ ಬೀಸಿ ತುಂತುರು ಮಳೆ ಸುರಿಯುತ್ತಿದೆ. ಚಂಡಮಾರುತದ ಪರಿಣಾಮ ಮುಂದಿನ ಮೂರು ದಿನ ಇದೇ ರೀತಿಯ ವಾತಾವರಣ ಇರಲಿದೆ.**



ಚಳಿಯೂ ಕಡಿಮೆಯಾಗಿ ಮೋಡಕವಿದ ವಾತಾವರಣ ನಿರ್ಮಾಣವಾಗಿದೆ. ಉಡುಪಿ, ಉತ್ತರ ಕನ್ನಡ, ಚಾಮರಾಜನಗರ, ಚಿಕ್ಕಮಗಳೂರು, ಹಾಸನ, ಕೊಡಗು, ಮೈಸೂರಿನಲ್ಲಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬಾಗಲಕೋಟೆ, ಬೀದರ್, ಧಾರವಾಡ, ಗದಗ, ಹಾವೇರಿ, ಕೊಪ್ಪಳ, ರಾಯಚೂರು, ವಿಜಯಪುರ, ಯಾದಗಿರಿ, ಚಿತ್ರದುರ್ಗ, ದಾವಣಗೆರೆ, ಕೋಲಾರ, ಮಂಡ್ಯ, ರಾಮನಗರ, ಶಿವಮೊಗ್ಗದಲ್ಲಿ ಒಣಹವೆ ಇರಲಿದೆ. ಬೆಂಗಳೂರಿನಲ್ಲಿ ಮೋಡಕವಿದ ವಾತಾವರಣವಿದ್ದು, ಸಾಧಾರಣ ಮಳೆಯಾಗುವ ನಿರೀಕ್ಷೆ ಇದೆ.

# ದೈಹಿಕ, ಮಾನಸಿಕ, ಬೌದ್ಧಿಕ ಬೆಳವಣಿಗೆಗೆ ಕ್ರೀಡೆ ಸಹಕಾರಿ: ರಾಜಣ್ಣ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: 'ಪ್ರತಿ ಮಗು ಕ್ರೀಡೆಯಲ್ಲಿ ಭಾಗವಹಿಸಬೇಕು. ಅವರ ದೈಹಿಕ ಮಾನಸಿಕ ಬೌದ್ಧಿಕ ಬೆಳವಣಿಗೆಯಲ್ಲಿ ಕ್ರೀಡೆಗಳು ಮಹತ್ವದ ಪಾತ್ರ ವಹಿಸುತ್ತದೆ' ಎಂದು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ದೈಹಿಕ ನಿರ್ದೇಶಕ ರಾಜಣ್ಣ ಹೇಳಿದರು.**

ಇಲ್ಲಿಯ ಬಸವಶ್ರೀ ಶಾಲೆಯಲ್ಲಿ ವಾರ್ಷಿಕ ಕ್ರೀಡಾ ದಿನಾಚರಣೆ ಹಾಗೂ ರಾಷ್ಟ್ರೀಯ ಯುವ ದಿನಾಚರಣೆ ಪ್ರಯುಕ್ತ ಆಯೋಜಿಸಿದ್ದ ಸ್ವಾಮಿ ವಿವೇಕಾನಂದರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. 'ವಿದ್ಯಾರ್ಥಿನಿಯರು ಹೆಚ್ಚಿನ ಆಸಕ್ತಿ ಆಟದಲ್ಲಿ



ತೊಡಗಿರಬೇಕು. ಆಟದಿಂದ ನಾಯಕತ್ವದ ಗುಣಗಳು, ಆಟದ ಉತ್ಸಾಹ, ಸೋಲು ಗೆಲುವು ಎಲ್ಲದರ ಅನುಭವ ಸ್ವೀಕರಿಸಿ ಯಶಸ್ಸಿನತ್ತ ಸಾಗಬೇಕು' ಎಂದು ತಿಳಿಸಿದರು. ಶಾಲೆಯ ಸಂಸ್ಥಾಪಕಿ ಲಲಿತಾ ಎಂ. ಮಾತನಾಡಿದರು. ಸುಗುಣ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಎಂ. ಬಸನಗೌಡ, ಶಾರದ ದಯಾಸಾಗರ, ಕ್ರೀಡಾ ಶಿಕ್ಷಕ ಆಂಥೋನಿ ಉಪಸ್ಥಿತರಿದ್ದರು.

ಶಾಲೆಯ ಮಕ್ಕಳು ಸಮವಸ್ತ್ರದಲ್ಲಿ ಲೇಜಿಮ್, ಡಂಬಲ್ಸ್, ಬೊಂಬು, ಬಳಸಿ ಆಕರ್ಷಕವಾಗಿ ನೃತ್ಯ ಪ್ರದರ್ಶಿಸಿದರು. ನಂತರ ಕ್ರೀಡೆ ವಿಜೇತರಿಗೆ ಬಹುಮಾನವಾಗಿ ಪದಕ, ಟ್ರೋಫಿ ಮತ್ತು ಪ್ರಮಾಣಪತ್ರ ವಿತರಿಸಲಾಯಿತು. ಶಾಲೆಯ ದೈಹಿಕ ಶಿಕ್ಷಣ ಶಿಕ್ಷಕ ಆಂಥ–ೋನಿ ಮಕ್ಕಳಿಗೆ ಬಹುಮಾನ ವಿತರಿಸಿದರು.

# ರಾಯಚೂರಾದ್ಯಂತ ಸಂಕ್ರಾಂತಿನ ಸಂಭ್ರಮ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲೆಯಾದ್ಯಂತ ಬುಧವಾರ ಮಕರ ಸಂಕ್ರಾಂತಿ ಹಬ್ಬವನ್ನು ಅರ್ಥ–ಪೂರ್ಣವಾಗಿ ಆಚರಿಸಲಾಯಿತು. ಮಹಿಳೆಯರು ಬೆಳಗಿನ ಜಾವ ಮನೆಯಂಗಳ ಸ್ವಚ್ಛಗೊಳಿಸಿ ಸಗಣಿಯಿಂದ ಸಾರಿಸಿ ಅಂ–ದವಾದ ರಂಗೋಲಿಯ ಚಿತ್ತಾರ ಮೂಡಿಸಿದರು. ಕೆಲವರು ಚುಕ್ಕಿ ರಂಗೋಲಿ ಇಟ್ಟರೆ, ಕೆಲವರು ಬಣ್ಣದ ರಂಗೋಲಿ ಪುಡಿ ಬಳಸಿ ಕಬ್ಬು ಬೆಲ್ಲ, ಎತ್ತುಗಳು ಹಾಗೂ ರೈತನ ಚಿತ್ರ ಬಿಡಿಸಿ ನೋಡುಗರ ಗಮನ ಸೆಳೆಯುವಂತೆ ಮಾಡಿದರು.**



ಅನೇಕ ಜನರು ಮಂತ್ರಾಲಯ, ನಾರದಗಡ್ಡೆ, ದತ್ತಪೀಠ, ತಿಂಥಣಿ, ಚಿಕ್ಕಲಪರವಿ, ದಡೇಸಗೂರಲ್ಲಿ ನದಿಗಳಲ್ಲಿ ಪುಣ್ಯ ಸ್ನಾನ ಮಾಡಿ ಪ್ರಾರ್ಥನೆ ಸಲ್ಲಿಸಿದರು. ಗ್ರಾಮೀಣ ಪ್ರದೇಶಗಳಲ್ಲಿ ದನಕರುಗಳ ಮೈತೊಳೆದು ಅಲಂಕಾರ ಮಾಡಿ ಮೆರವಣಿಗೆ ಮಾಡಲಾಯಿತು. ಮಹಿಳೆಯರು ವಿಶೇಷ ಖಾದ್ಯ ಸಿದ್ಧಪಡಿಸಿ ದೇವಸ್ಥಾನಗಳಿಗೆ ತೆರಳಿ ದೇವರಿಗೆ ನೈವೇದ್ಯ ಸಮರ್ಪಿಸಿದರು. ರೈತರು ಹಾಗೂ ಕೃಷಿ ಹಿನ್ನೆಲೆ ಯುಳ್ಳವರು ಕುಟುಂಬದ ಸದಸ್ಯರೊಂದಿಗೆ ತೋಟಗಳಿಗೆ ತೆರಳಿ ಸಾಮೂಹಿಕವಾಗಿ ಭೋಜನ ಮಾಡಿದರು. ನಗರದ ಪ್ರದೇಶದ ಜನ ಸಹ ಉದ್ಯಾನ ಹಾಗೂ ಪ್ರವಾಸಿ ತಾಣಗಳಿಗೆ ತೆರಳಿ ಸಾಮೂಹಿಕ ಭೋಜನ ಮಾಡಿ ಸಂಭ್ರಮಿಸಿದರು.

ಕಡ್ಲೆಬೇಳೆ ಮತ್ತು ಬೆಲ್ಲದ ಹೂರಣವನ್ನು ತುಂಬಿಸಿ ತಯಾರಿಸಿದ ಹೋಳಿಗೆ, ಶೇಂಗಾ ಹೋಳಿಗೆ, ಪಾಯಸ, ಸಾವಿಗೆ, ತಾಜಾ ಕಾಳುಗಳನ್ನು ಬಳಸಿ ತಯಾ–ರಿಸಿದ ವಿಶೇಷ ಸಾರು, ಪಲ್ಯ ಸೇವಿಸಿದರು ಸಂಜೆ ವೇಳೆ ಮಹಿಳೆಯರು ಹಾಗೂ ಹೆಣ್ಣು ಮಕ್ಕಳು ಹೊಸ ಬಟ್ಟೆ ತೊಟ್ಟು ಮನೆ ಮನೆಗೆ ತೆರಳಿ ಎಳ್ಳುಬೆಲ್ಲ ವಿತರಿಸಿ ಹಬ್ಬದ ಶುಭಾಶಯ ಕೋರಿದರು. ಯುವಕರು ಹಾಗೂ ಬಾಲಕರು ಮೈದಾನಗಳಲ್ಲಿ ಗಾಳಿಪಟ ಹಾರಿಸಿ ಸಂಭ್ರಮಿಸಿದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

# ಸಂಸದ ರಾಜಶೇಖರ್ ಹಿಟ್ನಾಳ, ಶಾಸಕ ಆರ್. ಬಸನಗೌಡರಿಂದ 748ಎ ಭಾರತ ಮಾಲಾ ಹೆದ್ದಾರಿ ಕಾಮಗಾರಿ ಪರಿಶೀಲನೆ

## ರೈತರಿಗೆ ಕೋರ್ಟಿಗೆ ಅಲೆದಾಡಿಸುವ ಕೆಲಸ ಮಾಡದೇ ಭೂಮಿ ಕಳೆದುಕೊಂಡ ರೈತರಿಗೆ ಭೂ–ಪರಿಹಾರ ನೀಡಿ: ಸಂಸದ ರಾಜಶೇಖರ್ ಹಿಟ್ನಾಳ

❑ ನೈಜ್ಯ ದೆಸೆ ನ್ಯೂಸ್

**ಮಸ್ಕಿ: ರಾಯಚೂರು–ಬೆಳಗಾವಿ ರಾಷ್ಟ್ರೀಯ ಹೆದ್ದಾರಿ 748ಎ ಭಾರತ ಮಾಲಾ ಕಾಮಗಾರಿಗೆ ಭೂಮಿ ಕಳೆದುಕೊಂಡ ರೈತರಿಗೆ ಕೂಡಲೇ ಹೆದ್ದಾರಿ ಪ್ರಾಧಿಕಾರದಿಂದ ಬೆಳೆ ಪರಿಹಾರ ಮತ್ತು ಭೂ–ಪ–ರಿಹಾರ ನೀಡಬೇಕೆಂದು ಪ್ರಾಧಿಕಾರ ಅಧಿಕಾರಿಗಳಿಗೆ ಮತ್ತು ಗುತ್ತಿಗೆದಾರರಿಗೆ ಸಂಸದ ರಾಜಶೇಖರ ಹಿಟ್ನಾಳ ಹಾಗೂ ಮಸ್ಕಿ ಶಾಸಕ ಆರ್ ಬಸನಗೌಡ ತುರುವಿಹಾಳ ಖಡಕ್ ಸೂಚನೆ ನೀಡಿದ್ದಾರೆ.**

ಮಸ್ಕಿ ತಾಲೂಕಿನ ಪಾಮನಕಲ್ಲೂರು, ಸಂತೆಕಲ್ಲೂರು ಹೊರವಲಯದಲ್ಲಿ ನಡೆದಿರುವ 748ಎ ಭಾರತ ಮಾಲಾ ರಾಷ್ಟ್ರೀಯ ಹೆದ್ದಾರಿ ನಿರ್ಮಾಣ ಕಾಮಗಾರಿ ಸ್ಥಳಕ್ಕೆ ಸಂಸದ ಮತ್ತು ಶಾಸಕ ಆರ್.ಬಸನಗೌಡ ತುರವಿಹಾಳ ಭೇಟಿ ನೀಡಿ ಕಾಮಗಾರಿಯನ್ನು ಪರಿಶೀಲಿಸಿದರು. ನಂತರ ಹೆದ್ದಾರಿಗಾಗಿ ಭೂಮಿ ಮತ್ತು ಬೆಳೆ ಕಳೆದಕೊಂಡ ಗೋನವಾರ ರೈತರು ಪರಿಹಾರ ನೀಡಿಲ್ಲವೆಂದು ಸಂಸದರಿಗೆ ದೂರು ನೀಡಿದ ಮೇಲೆ ರೈತ–ರಿಗೆ ಪರಿಹಾರ ನೀಡದೆ ಹೇಗೆ ಕೆಲಸ ಆರಂಭ



**ಮಸ್ಕಿ ಶಾಸಕ ಆರ್. ಬಸನಗೌಡ ಅವರು ಕೆಡಿಪಿ ಸಭೆಯಲ್ಲಿ ಧ್ವನಿ ಎತ್ತಿದ್ದರಿಂದ ರೈತರು ಬಚಾವ್**

**ರಾಯಚೂರಿನಲ್ಲಿ ನಡೆದ ಕೆಡಿಪಿ ಸಭೆಯಲ್ಲಿ ಮಸ್ಕಿ ವಿಧಾನಸಭಾ ಕ್ಷೇತ್ರದ ಶಾಸಕ ಆರ್ ಬಸನಗೌಡ ತುರುವಿಹಾಳ ಅವರು ಇತ್ತೀಚಿಗೆ ಹೆದ್ದಾರಿ ಭೂಸ್ವಾಧೀನಕ್ಕೆ ಸಂಬಂಧಪಟ್ಟಂತೆ ಧ್ವನಿ ಎತ್ತಿದ್ದರಿಂದ ಇಲ್ಲಿನ ರೈತರು ಬಚಾವಾಗಿದ್ದೇವೆ ಇಲ್ಲದಿದ್ದರೆ ಇಲ್ಲಿಯವರೆಗೆ ನಮಗೆ ಪೊಲೀಸ್ ಠಾಣೆ ಮೆಟ್ಟಿಲು ಹತ್ತಿಸುತ್ತಿದ್ದರು ಎಂದು ಹೇಳಿದರು ಶಾಸಕರು ನಮ್ಮ ಪರವಾಗಿ ಧ್ವನಿ ಎತ್ತಿದ್ದಕ್ಕೆ ರೈತರ ಪರವಾಗಿ ಧನ್ಯವಾದ ಸಲ್ಲಿಸುವದಾಗಿ ಹೇಳಿದರು.**

ಮಾಡಿದ್ದೀರಿ ಮೊದಲು ರೈತರಿಗೆ ಪರಿಹಾರ ಕೊಡಿ, ಪರಿಹಾರ ನೀಡುವಲ್ಲಿ ತಾರತಮ್ಯ ಮಾಡುತ್ತಿದ್ದಾರೆಂಬ ದೂರುಗಳು ಕೇಳಿ ಬರುತ್ತಿವೆ.

ಹೆದ್ದಾರಿ ಕಾಮಗಾರಿ ಸಲುವಾಗಿ ಭೂಮಿ ಮತ್ತು ಬೆಳೆ ಕಳೆದುಕೊಂಡ ರೈತರ ಜಮೀನುಗಳನ್ನು ಕೂಡಲೇ ಜಂಟಿಯಾಗಿ ಸರ್ವೇ ನಡೆಸಿ ಪರಿಹಾರ

- ❖ಅಮಾಯಕ ರೈತರಿಗೆ ಪೊಲೀಸರಿಂದ ಕಿರುಕುಳ ನೀಡಿದ ಆರೋಪ.
- ❖ಹೆದ್ದಾರಿ ಪ್ರಾಧಿಕಾರದ ದೌರ್ಜನ್ಯಕ್ಕೆ ಭೂಮಿ ಕಳೆದುಕೊಂಡ ಕಂಗಾಲಾದ ಗೋನವಾರ ರೈತರು
- ❖ಭೂ ಮತ್ತು ಬೆಳೆ ಪರಿಹಾರ ನೀಡುವಲ್ಲಿ ತಾರತಮ್ಯ ಆರೋಪ
- ❖ಪರಿಹಾರ ಕೇಳಲೋದ ರೈತರಿಗೆ ಬಂಧನದ ಭೀತಿ ರೈತರಲ್ಲಿ ಆತಂಕ.
- ❖ಗುತ್ತಿಗೆದಾರರ ತಾಳಕ್ಕೆ ತಕ್ಕಂತೆ ಕುಣಿಯುತ್ತಿರುವ ಜಿಲ್ಲಾಡಳಿತ ರೈತರ ಆರೋಪ.

**ಹೆದ್ದಾರಿ ರಸ್ತೆ ನಿರ್ಮಾಣಕ್ಕಾಗಿ ಯಾವ ರೈತರು ಭೂಮಿಯನ್ನು ಕಳೆದುಕೊಂಡಿದ್ದಾರೋ ಇನ್ನು ಉಳಿದ ಭೂಮಿ ಉಳಿಮೆ ಮಾಡಲು ಓಡಾಡಲು ತೊಂದರೆ ಆಗುತ್ತಿದ್ದರೆ ಅವಶ್ಯವಿರುವ ಸ್ಥಳವನ್ನು ಗುರುತಿಸಿ ಸೇತುವೆ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಿ ಹಾಗೂ ಸಮರ್ಪಕ ಪರಿಹಾರ ನೀಡಬೇಕು**
**–ಸಂಸದ ರಾಜಶೇಖರ ಹಿಟ್ನಾಳ್**

ವಂಚಿತ ರೈತರಿಗೆ ಪರಿಹಾರ ನೀಡಬೇಕೆಂದರು. ನಂತರ ಶಾಸಕ ಆರ್. ಬಸನಗೌಡ ಮಾತನಾಡಿ ಭೂಮಿ ಕಳೆದಕೊಂಡ ರೈತರಿಗೆ ಭೂ ಪರಿಹಾರ ನೀಡದೇ ಕಾಮಗಾರಿಯನ್ನು ಆರಂಭಿಸಿದ್ದರಿಂದ ಇಂತಹ ಸಮಸ್ಯೆ ಎದುರಿಸಬೇಕಾಗಿದೆ. ಜಂ–ಟಿಯಾಗಿ ಸರ್ವೇ ಕಾರ್ಯ ನಡೆಸದೇ ಭೂಮಿ ಹೇಗೆ ವಶಕ್ಕೆ ತೆಗೆದುಕೊಂಡು ಕೆಲಸ ಆರಂಭಿಸಿದ್ದಿರಿ ಎಂದು ದೂರಿದರು. ಅಧಿಕಾರಿಗಳು ಯಾವುದೇ ಕಾರಣಕ್ಕೂ ರೈತರಿಗೆ ತೊಂದರೆ ಕೊಟ್ಟರೆ ಸಹಿಸುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

ಪರಿಹಾರ ನೀಡುವಲ್ಲಿ ತಾರತಮ್ಯ ಮಾಡದೆ ನೀರಾವರಿ ಇಲಾಖೆಯ ನೋಟಿಪಿಕೇಶ ಪ್ರಕಾರ ರೈತರಿಗೆ ಪರಿಹಾರ ನೀಡಿ. ಪರಿಹಾರಕ್ಕಾಗಿ ರೈತರನ್ನು ಕೋರ್ಟ್‌ವರೆಗೂ ಅಲೆದಾಡಿಸುವ ಕೆಲಸ ಮಾಡಬೇಡಿ ಎಂದು ಸೂಚನೆ ನೀಡಿದರು. ಈ ಸಂದರ್ಭದಲ್ಲಿ ಲಿಂಗಸ್ೂಗುರು ಸಹಾಯಕ ಆಯುಕ್ತ ಬಸವಣ್ಣಪ್ಪ ಕಲಶೆಟ್ಟಿ, ತಹಸೀಲ್ದಾರ್ ಮಂಜುನಾಥ ಬೋಗಾವತಿ, ಭೂ–ಸ್ವಾಧೀನ ಅಧಿಕಾರಿ ಗುರುಸಿದ್ದಯ್ಯ, ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು, ಸಿದ್ರಾಮಪ್ಪ ಸಾಹುಕಾರ, ಹೆಚ್.ಬಿ.ಮುರಾರಿ, ಸಿಪಿಐ ರಾಮಪ್ಪ ಜಳಗೇರಿ ಸೇರಿದಂತೆ ಇನ್ನಿತರರಿದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಬಿ.ಎಸ್ಸಿ. ಆಪ್ಟೋಮೆಟ್ರಿ

ಆಪ್ಟೋಮೆಟ್ರಿ ಎಂಬುದು ಕಣ್ಣು ಮತ್ತು ದೃಷ್ಟಿ ಆರೈಕೆಗೆ ಸಂಬಂಧಿಸಿದ ಆರೋಗ್ಯ ರಕ್ಷಣಾ ವೃತ್ತಿಯಾಗಿದೆ. ಆಪ್ಟೋಮೆಟ್ರಿಸ್ಟ್‌ಗಳು ಪ್ರಾಥಮಿಕ ಆರೋಗ್ಯ ರಕ್ಷಣಾ ವೃತ್ತಿಪರರಾಗಿದ್ದು, ಅವರ ಜವಾಬ್ದಾರಿಗಳಲ್ಲಿ ವಕ್ರೀಭವನ ಮತ್ತು ವಿತರಣೆ, ಕಣ್ಣಿನ ಸ್ಥಿತಿಗಳ ಪತ್ತೆ ಮತ್ತು ನಿರ್ವಹಣೆಯಲ್ಲಿ ಸಹಾಯ ಮಾಡುವುದು ಮತ್ತು ದೃಶ್ಯ ವ್ಯವಸ್ಥೆಯ ಸ್ಥಿತಿಗಳ ಪುನರ್ವಸತಿ ಸೇರಿವೆ. ಅವಲೋಕನ ಅವಲೋಕನ ಬಿಎಸ್ಸಿ ಆಪ್ಟೋಮೆಟ್ರಿ ಪೂರ್ಣಾವಧಿಯ ಪದವಿಪೂರ್ವ ಕಾರ್ಯಕ್ರಮವಾಗಿದೆ. ಇದು ನಾಲ್ಕು ವರ್ಷಗಳ ಪದವಿ ಕಾರ್ಯಕ್ರಮವಾಗಿದ್ದು, ಇದನ್ನು ಎಂಟು ಸೆಮಿಸ್ಟರ್‌ಗಳ ಅಧ್ಯಯನವಾಗಿ ವಿಂಗಡಿಸಲಾಗಿದೆ. ಈ ಎಂಟು ಸೆಮಿಸ್ಟರ್‌ಗಳಲ್ಲಿ, ಆರು ಸೆಮಿಸ್ಟರ್‌ಗಳು ಸಿದ್ಧಾಂತ ಆಧಾರಿತ ಮತ್ತು ತರಗತಿಯಲ್ಲಿ ನಡೆಸಲ್ಪಡುತ್ತವೆ ಮತ್ತು ಉಳಿದ ಎರಡು ಸೆಮಿಸ್ಟರ್‌ಗಳು ತರಬೇತಿ ಆಧಾರಿತ ಮತ್ತು ತೃತೀಯ ಕಣ್ಣಿನ ಆರೈಕೆ ಆಸ್ಪತ್ರೆಯಲ್ಲಿ ನಡೆಸಲ್ಪಡುತ್ತವೆ. ಡಾ. ಅಗರ್ವಾಲ್ಸ್ ಇನ್‌ಸ್ಟಿಟ್ಯೂಟ್ ಆಫ್ ಆಪ್ಟೋಮೆಟ್ರಿ ತಮಿಳುನಾಡಿನ ಬಿಎಸ್ಸಿ ಆಪ್ಟೋಮೆಟ್ರಿ ಕಾಲೇಜುಗಳಲ್ಲಿ ಅತ್ಯುತ್ತಮವಾಗಿದೆ. ಇದು ಡಾ. ಅಗರ್ವಾಲ್ಸ್ ಗ್ರೂಪ್ ಆಫ್ ಐ ಹಾಸ್ಪಿಟಲ್ಸ್ & ಐ ರಿಸರ್ಚ್ ಸೆಂಟರ್‌ನ ಒಂದು ಘಟಕವಾಗಿದೆ. ಇದನ್ನು 2006 ರಲ್ಲಿ ಅಳಗಪ್ಪ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ಪ್ರಾರಂಭಿಸಲಾಯಿತು. ಡಾ ಅಗರ್ವಾಲ್ಸ್ ಕಣ್ಣಿನ ಆಸ್ಪತ್ರೆಗಳ ಆಶ್ರಯದಲ್ಲಿ, ವಿದ್ಯಾರ್ಥಿಗಳು ನೇತ್ರ ಉದ್ಯಮದಲ್ಲಿ ಇತ್ತೀಚಿನ ಪ್ರಗತಿಗಳು ಮತ್ತು ತಂತ್ರಜ್ಞಾನಕ್ಕೆ ಒಡ್ಡಿಕೊಳ್ಳುತ್ತಾರೆ. ಭಾರತದಲ್ಲಿ ದೃಷ್ಟಿ ಸಂಬಂಧಿತ ಸಮಸ್ಯೆಗಳು ಹೆಚ್ಚುತ್ತಿರುವುದರಿಂದ, ಸಮೀಪದೃಷ್ಟಿಯಂತಹ ವಕ್ರೀಭವನದ ಸಮಸ್ಯೆಗಳು ಸೇರಿದಂತೆ ವೃತ್ತಿಯಾಗಿ ಆಪ್ಟೋಮೆಟ್ರಿಯ ವ್ಯಾಪ್ತಿ ಹೆಚ್ಚುತ್ತಿದೆ. ಭಾರತದಲ್ಲಿ ಮಕ್ಕಳು ಮತ್ತು ವಯಸ್ಕರಲ್ಲಿ ಸಮೀಪದೃಷ್ಟಿ ಹರಡುವಿಕೆಯು ಹೆಚ್ಚುತ್ತಿರುವ ಪ್ರವೃತ್ತಿಯಲ್ಲಿದೆ. ಅಧ್ಯಯನಗಳ ಪ್ರಕಾರ, 1-6 ವರ್ಷ ವಯಸ್ಸಿನ 5 ಮಕ್ಕಳಲ್ಲಿ 15 ಸಮೀಪದೃಷ್ಟಿಯಿಂದ ಬಳಲುತ್ತಿದ್ದಾರೆ. ಇದನ್ನು ಎದುರಿಸಲು ಮತ್ತು ಪರಿಣಾಮಕಾರಿಯಾಗಿ ನಿಭಾಯಿಸಲು. ಇದನ್ನು ಎದುರಿಸಲು, ಭಾರತಕ್ಕೆ ಹೆಚ್ಚು ತರಬೇತಿ ಪಡೆದ ನೇತ್ರಶಾಸ್ತ್ರಜ್ಞರು, ನೇತ್ರಶಾಸ್ತ್ರಜ್ಞರು ಮತ್ತು ನೇತ್ರಶಾಸ್ತ್ರಜ್ಞರು ಬೇಕಾಗುತ್ತಾರೆ. MoHFW ಪ್ರಕಾರ, 4 ವರ್ಷಗಳಿಗಿಂತ ಕಡಿಮೆ ಅವಧಿಯ ಆಪ್ಟೋಮೆಟ್ರಿ ಕಾರ್ಯಕ್ರಮವನ್ನು ಪೂರ್ಣಗೊಳಿಸಿದ ವಿದ್ಯಾರ್ಥಿಯನ್ನು ಆಪ್ಟೋಮೆಟ್ರಿಸ್ಟ್ ಅಲ್ಲ, ನೇತ್ರ ಸಹಾಯಕ ಎಂದು ಪರಿಗಣಿಸಲಾಗುತ್ತದೆ. ನೇತ್ರಶಾಸ್ತ್ರಜ್ಞರು ಸ್ವತಂತ್ರವಾಗಿ ಅಭ್ಯಾಸ ಮಾಡಬಹುದಾದ ಆಪ್ಟೋಮೆಟ್ರಿಸ್ಟ್‌ಗಿಂತ ಭಿನ್ನವಾಗಿ, ನೇತ್ರಶಾಸ್ತ್ರಜ್ಞರ ಮೇಲ್ವಿಚಾರಣೆಯಲ್ಲಿ ಮಾತ್ರ ನೇತ್ರ ಸಹಾಯಕರು ಅಭ್ಯಾಸ ಮಾಡಬಹುದು. ವರ್ಗ-I ವಿಶ್ವವಿದ್ಯಾಲಯವಾಗಿ ಶ. ಕಣ್ಣಿನ ಆರೈಕೆ ಮತ್ತು ಅತ್ಯಾಧುನಿಕ ವಿಶ್ವವಿದ್ಯಾಲಯದಲ್ಲಿ ಪ್ರವರ್ತಕರ ಈ ಸಹಯೋಗವು ಈ ಕಾರ್ಯಕ್ರಮವನ್ನು ಅನನ್ಯ ಮತ್ತು ಇತರರಿಗಿಂತ ವಿಭಿನ್ನವಾಗಿಸುತ್ತದೆ. (BSc Optometry) ಎಂದರೆ ಕಣ್ಣಿನ ಆರೋಗ್ಯ ಮತ್ತು ದೃಷ್ಟಿ ಪರೀಕ್ಷೆಗೆ ಸಂಬಂಧಿಸಿದ 3-4 ವರ್ಷಗಳ ಪದವಿಪೂರ್ವ ಕೋರ್ಸ್ (3 ಶೈಕ್ಷಣಿಕ ವರ್ಷ + 1 ಇಂಟರ್ನ್‌ಶಿಪ್), ಇದರಲ್ಲಿ ಕಣ್ಣಿನ ಅಂಗರಚನಾಶಾಸ್ತ್ರ, ದೃಗ್ವಿಜ್ಞಾನ, ಕಣ್ಣಿನ ರೋಗಗಳು ಮತ್ತು ಮಸೂರಗಳ ಬಳಕೆಯನ್ನು ಅಧ್ಯಯನ ಮಾಡಿ ವೃತ್ತಿಪರ ಆಪ್ಟೋಮೆಟ್ರಿಸ್ಟ್ ಆಗಲು ತರಬೇತಿ ನೀಡಲಾಗುತ್ತದೆ, 10+2 ರಲ್ಲಿ PCMB (ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತ, ಜೀವಶಾಸ್ತ್ರ) ಪಾಸಾದವರಿಗೆ ಪ್ರವೇಶವಿರುತ್ತದೆ. ಕೋರ್ಸ್ ವಿವರಗಳು Bachelor of Science in Optometry (BSc Optometry) ಅವಧಿ: ಒಟ್ಟು 4 ವರ್ಷ (3 ವರ್ಷಗಳ ಶೈಕ್ಷಣಿಕ ತರಗತಿಗಳು + 1 ವರ್ಷದ ಇಂಟರ್ನ್‌ಶಿಪ್). ಅರ್ಹತೆ: 10+2 (12ನೇ ತರಗತಿ) ನಲ್ಲಿ ವಿಷಯಗಳಲ್ಲಿ ಉತ್ತೀರ್ಣರಾಗಿರಬೇಕು. ಶೈಕ್ಷಣಿಕ ಮಾದರಿ: ಪ್ರತಿ ವರ್ಷ ಎರಡು ಸೆಮಿಸ್ಟರ್‌ಗಳಾಗಿ ವಿಂಗಡಿಸಲಾಗಿದೆ. ಪಠ್ಯಕ್ರಮ (ಕೆಲವು ವಿಷಯಗಳು) ಕಣ್ಣಿನ ಅಂಗರಚನಾಶಾಸ್ತ್ರ ಮತ್ತು ಶರೀರಶಾಸ್ತ್ರ ದೃಗ್ವಿಜ್ಞಾನ ಕಾಂಟ್ಯಾಕ್ಟ್ ಲೆನ್ಸ್‌ಗಳು ದೃಷ್ಟಿ ಉಪಕರಣಗಳು ಕಣ್ಣಿನ ರೋಗಗಳು ಕ್ಲಿನಿಕಲ್ ಆಪ್ಟೋಮೆಟ್ರಿ ತರಬೇತಿ. ವೃತ್ತಿ ಅವಕಾಶಗಳು ಕಣ್ಣಿನ ಆಸ್ಪತ್ರೆಗಳು ಮತ್ತು ಕ್ಲಿನಿಕ್‌ಗಳು. ಆಪ್ಟಿಕಲ್ ಕೇಂದ್ರಗಳು. ಸಂಶೋಧನಾ ಸಂಸ್ಥೆಗಳು

## ಇಂದು ಮೈಲೇಶ್ವರದಲ್ಲಿ ಬ್ರಿಲಿಯಂಟ್ ಕಲಾ ವೈಭವ ಕಾರ್ಯಕ್ರಮ

❑ ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಮೈಲೇಶ್ವರದ ಬ್ರಿಲಿಯಂಟ್ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರಾಥಮಿಕ ಮತ್ತು ಪ್ರೌಢಶಾಲೆ ಇದರ ಕಲಾ ವೈಭವ ಕಾರ್ಯಕ್ರಮ ಇಂದು ಮತ್ತು ನಾಳೆ (ಜ.16,17) ಎರಡು ದಿನಗಳ ಕಾಲ ಶಾಲಾ ಆವರಣದಲ್ಲಿ ನಡೆಯಲಿದೆ. ಇಂದು ಬೆಳಿಗ್ಗೆ 9.30 ಘಂಟೆಗೆ ನಡೆಯಲಿರುವ ಉದ್ಘಾಟನಾ ಸಮಾರಂಭದ ದಿವ್ಯ ಸಾನಿಧ್ಯವನ್ನು ಖಾಸ್ಗತೇಶ್ವರ ಮಠದ ಪೂಜ್ಯಶ್ರೀ ಸಿದ್ದಲಿಂಗ ದೇವರು ಹಾಗೂ ಕೋಲಾರದ ಶ್ರೀ ಪಟ್ಟದೇವರು ಹಿರೇಮಠದ ಪೂಜ್ಯ ಪ್ರಭುಕುಮಾರ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸುವರು.**

ಮುದ್ದೇಬಿಹಾಳ ಕ್ಷೇತ್ರ ಶಿಕ್ಷಣಾಧಿಕಾರಿ ಬಿ ಎಸ್ ಸಾವಳಗಿ ಸಮಾರಂಭವನ್ನು ಉದ್ಘಾಟಿಸುವರು. ತಾಳಿಕೋಟಿ ಸರ್ವಜ್ಞ ವಿದ್ಯಾಪೀಠದ ಅಧ್ಯಕ್ಷ ಸಿದ್ದನಗೌಡ ಮಂಗಳೂರ ಮುಖ್ಯ ಅತಿಥಿಗಳಾಗಿ ಆಗಮಿಸುವರು. ಶ್ರೀ ಮಾರುತಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಎನ್.ಬಿ. ನಡುವಿನಮನಿ ಅಧ್ಯಕ್ಷತೆ ವಹಿಸುವರು. ಕ್ಷೇತ್ರ ಸಮನ್ವಯಾಧಿಕಾರಿ ಆರ್ ಬಿ ದಮ್ಮೂರಮಠ, ಶಿಕ್ಷಣ ಸಂಯೋಜಕ ಎಸ್ ಎಸ್ ಹಿರೇಮಠ, ಸಿ ಆರ್ ಸಿ ಕೆ.ಎಸ್.ಸಜ್ಜನ ಹಾಗೂ ಸಮೂಹ ಸಂಪನ್ಮೂಲ ವ್ಯಕ್ತಿ ರಾಜು ಮೂರುಮಾನ ಅವರ ಗೌರವ ಉಪಸ್ಥಿತಿ ಇರುವುದು. ನಂತರ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗುವವು. ನಾಳೆ ದಿನಾಂಕ: 17-01-2026 ಶನಿವಾರ ಬೆಳಿಗ್ಗೆ 9.30 ಘಂಟೆಗೆ ಆರಂಭವಾಗಲಿರುವ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಜಾಲಹಳ್ಳಿ ಸಂಸ್ಥಾನ ಬ್ರಹನ್ಮಠದ ಪೂಜ್ಯ ಶ್ರೀ ಷ.ಬ್ರ. ಜಯಶಾಂತಲಿಂಗೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು, ತಾಳಿಕೋಟಿಯ ಪೂಜ್ಯ ಶ್ರೀ ಸಿದ್ದಲಿಂಗ ದೇವರು ವಹಿಸುವರು.ತೆಲಸಂಗದ ಜ್ಞಾನಭಾರತಿ ವಿದ್ಯಾ ಸಂಸ್ಥೆ ಅಧ್ಯಕ್ಷ ಡಾ.ಭರಮಣ್ಣ ಕಾಮನ್ ಸಮಾರಂಭ ಉದ್ಘಾಟಿಸುವರು. ಕಾರ್ಕಳದ ಅಂಕಣಕಾರರು, ಉಪನ್ಯಾಸಕಿ ಅಕ್ಷಯಾ ಗೋಖಲೆ ಮುಖ್ಯ ಅತಿಥಿಗಳಾಗಿ ಆಗಮಿಸುವರು. ಶ್ರೀ ಮಾರುತಿ ಶಿಕ್ಷಣ ಸಂಸ್ಥೆ ಅಧ್ಯಕ್ಷ ಎನ್‌ಬಿ ನಡುವಿನಮನಿ ಅಧ್ಯಕ್ಷತೆ ವಹಿಸುವರು. ಕಾರ್ಯಕ್ರಮದಲ್ಲಿ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿಯ ಉಪಾಧ್ಯಕ್ಷ ಆರ್. ಬಿ.ನಡುವಿನಮನಿ, ಕಾರ್ಯದರ್ಶಿ ಎಮ್.ಬಿ.ಮಡಿವಾಳರ, ನಿರ್ದೇಶಕ ಎಸ್.ಹೆಚ್.ಪಾಟೀಲ, ನಿರ್ದೇಶಕಿ ಎಲ್.ಎಂ.ಬಿರಾದಾರ,ಎನ್.ಎಸ್.ಗಡಗಿ, ನಿರ್ದೇಶಕ ಶಶಿಧರ ಎಮ್.ಬಿರಾದಾರ, ಮುಖ್ಯೋಪಾಧ್ಯಾಯರು ಬೋಧಕ ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿರುವರು. ವೇದಿಕೆ ಕಾರ್ಯಕ್ರಮದ ನಂತರ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ.

## ಬಳಗಾನೂರು :ಪಟ್ಟಣದ ಪೊಲೀಸ್ ಠಾಣೆಗೆ ಸಿಂಧನೂರು ಗ್ರಾಮೀಣ ವೃತ್ತದ ಸಿಪಿಐ ವಿನಾಯಕ ಅವರು ಭೇಟಿ

❑ ನೈಜ್ಯ ದೆಸೆ ನ್ಯೂಸ್



**ಬಳಗಾನೂರು: ಪಟ್ಟಣದ ಪೊಲೀಸ್ ಠಾಣೆಗೆ ಸಿಂಧನೂರು ಗ್ರಾಮೀಣ ವೃತ್ತದ ಸಿಪಿಐ ವಿನಾಯಕ ಅವರು ಭೇಟಿ ನೀಡಿ, ಠಾಣಾ ವ್ಯಾಪ್ತಿಯಲ್ಲಿ ದಾಖಲಾಗಿರುವ ರೌಡಿ ಶೀಟರ್‌ಗಳು ಹಾಗೂ ಎಂಒಬಿ (MO-B) ಪಟ್ಟಿಯಲ್ಲಿರುವವರ ಪರೇಡ್ ನಡೆಸಿದರು.**

ಪರೇಡ್ ಸಂದರ್ಭದಲ್ಲಿ ಪಟ್ಟಣ ಹಾಗೂ ಠಾಣಾ ವ್ಯಾಪ್ತಿಯ ವಿವಿಧ ಗ್ರಾಮಗಳಿಂದ ಹಾಜರಿದ್ದ ರೌಡಿ ಶೀಟರ್‌ಗಳು ಮತ್ತು ಎಂಒಬಿದಾರರನ್ನು ಉದ್ದೇಶಿಸಿ ಮಾತನಾಡಿದ ಸಿಪಿಐ ವಿನಾಯಕ ಅವರು, ಕಾನೂನು ಪಾಲನೆ ಕುರಿತು ಸವಿಸ್ತಾರವಾಗಿ ತಿಳುವಳಿಕೆ ನೀಡಿದರು. ಸಮಾಜದಲ್ಲಿ ಶಾಂತಿ, ಸುವ್ಯವಸ್ಥೆ ಕಾಪಾಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಯಾವುದೇ ರೀತಿಯ ಗಲಾಟೆ, ಹಲ್ಲೆ, ಅಕ್ರಮ ಚಟುವಟಿಕೆಗಳು, ಬೆದರಿಕೆ, ಜೂಜು, ಮದ್ಯಪಾನ, ಅಕ್ರಮ ವಹಿವಾಟು ಹಾಗೂ ಕಾನೂನುಬಾಹಿರ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬಾರದೆಂದು ಕಟ್ಟುನಿಟ್ಟಾಗಿ ಸೂಚಿಸಿದರು.

ಮುಂದಿನ ದಿನಮಾನಗಳಲ್ಲಿ ಕಾನೂನು ಮೀರಿದರೆ ಪೊಲೀಸ್ ಇಲಾಖೆ ಕಠಿಣ ಕ್ರಮ ಕೈಗೊಳ್ಳಲಿದ್ದು, ಯಾವುದೇ ರೀತಿಯ ಸಡಿಲಿಕೆ ನೀಡಲಾಗುವುದಿಲ್ಲ ಎಂದು ಎಚ್ಚರಿಕೆ ನೀಡಿದರು. ಉತ್ತಮ ಜೀವನ ನಡೆಸಿ ಸಮಾಜದ ಮುಖ್ಯಧಾರೆಯಲ್ಲಿ ಸೇರಿಕೊಳ್ಳುವಂತೆ ಸಲಹೆ ನೀಡಿದ ಅವರು, ಪೊಲೀಸರೊಂದಿಗೆ ಸಹಕರಿಸಿದರೆ ಕಾನೂನುಬದ್ಧವಾಗಿ ಬದುಕಲು ಎಲ್ಲಾ ರೀತಿಯ ಮಾರ್ಗದರ್ಶನ ನೀಡಲಾಗುವುದು ಎಂದು ಹೇಳಿದರು.ಈ ಕ್ರಮದಿಂದ ಪಟ್ಟಣದಲ್ಲಿ ಶಾಂತಿ, ಭದ್ರತೆ ಹಾಗೂ ಸಾರ್ವಜನಿಕರಲ್ಲಿ ವಿಶ್ವಾಸ ಮೂಡಿಸುವ ಉದ್ದೇಶವಿದ್ದು, ಅಪರಾಧ ಚಟುವಟಿಕೆಗಳನ್ನು ತಡೆಗಟ್ಟಲು ಇಂತಹ ಪರೇಡ್‌ಗಳು ನಿರಂತರವಾಗಿ ನಡೆಸಲಾಗುತ್ತದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಎಎಸ್‌ಐ ಸಿದ್ದಪ್ಪ, ಸಿಬ್ಬಂದಿಗಳಾದ ವೆಂಕಟೇಶ್, ರೇವಣ್ಣಸಿದ್ದಪ್ಪ, ಹನುಮಂತ, ಪ್ರಕಾಶ್ ಸೇರಿದಂತೆ ಇತರ ಪೊಲೀಸ್ ಸಿಬ್ಬಂದಿ

## ಬರ್ಮಾ ಕ್ಯಾಂಪ್ ಆರೋಗ್ಯ ಮಾತೆ ದೇವಾಲಯದಲ್ಲಿ ಸಾಮೂಹಿಕ ಪೊಂಗಲ್ ಆಚರಣೆ





❑ ನೈಜ್ಯ ದೆಸೆ ನ್ಯೂಸ್

**ಬರ್ಮಾ ಕ್ಯಾಂಪ್‌ನ ಆರೋಗ್ಯ ಮಾತೆ ದೇವಾಲಯದಲ್ಲಿ ಭಕ್ತಿಭಾವ, ಐಕ್ಯತೆ ಹಾಗೂ ಪರಸ್ಪರ ಸಹಬಾಳ್ವೆಯ ಸಂದೇಶವನ್ನು ಸಾರುವಂತೆ ಸಾಮೂಹಿಕ ಪೊಂಗಲ್ ಹಬ್ಬವನ್ನು ವೈಭವದಿಂದ ಆಚರಿಸಲಾಯಿತು.**

ಈ ಸಂದರ್ಭದಲ್ಲಿ ದೇವಾಲಯದಲ್ಲಿ ಬಲಿ ಪೂಜೆ ಅರ್ಪಿಸಿ, ಭಕ್ತರು ತಮ್ಮ ತಮ್ಮ ಮನೆಗಳಲ್ಲಿ ತಯಾರಿಸಿದ ಪೊಂಗಲ್ ಆಹಾರವನ್ನು ಬಲಿಪೀಠಕ್ಕೆ ಸಮರ್ಪಿಸಿದರು. ರೈತರ ಸಮೃದ್ಧಿಗಾಗಿ, ರೈತಮಿತ್ರ ದನ?ಕರುಗಳ ಆರೋಗ್ಯ ಹಾಗೂ ಹೊಲ?ಗದ್ದೆಗಳ ಫಲವತ್ತತೆಗೆ ವಿಶೇಷ ಪ್ರಾರ್ಥನೆ ಸಲ್ಲಿಸಿ ದಿವ್ಯ ಬಲಿ ಪೂಜೆಯನ್ನು ನೆರವೇರಿಸಲಾಯಿತು. ಎಲ್ಲಾ ಮನೆಗಳಿಂದ ತಂದ ಪೊಂಗಲ್ ಆಹಾರವನ್ನು ಒಂದೇ ಪಾತ್ರೆಯಲ್ಲಿ ಬೆರೆಸಿ ಹಂಚುವ ಮೂಲಕ ಎಲ್ಲರೂ ಭಾವೈಕ್ಯದಿಂದ ಬದುಕುವ ಸಹಬಾಳ್ವೆಯ ಪಾಠವನ್ನು ಈ ಆಚರಣೆ ಪ್ರತಿಬಿಂಬಿಸಿತು.

ಪೊಂಗಲ್ ಹಬ್ಬವನ್ನು ಮೂರು ದಿನಗಳ ಕಾಲ-ಭೋಗಿ ಪೊಂಗಲ್, ಮಾಟ್ ಪೊಂಗಲ್ (ದನ-ಕರುಗಳಿಗಾಗಿ ವಿಶೇಷ ಪೊಂಗಲ್) ಮತ್ತು ಕಾಣ ಪೊಂಗಲ್ ವಿಭಿನ್ನ ರೀತಿಯಲ್ಲಿ ಆಚರಿಸಲಾಯಿತು. ಈ ಗ್ರಾಮದಲ್ಲಿ ಸುಮಾರು 54 ವರ್ಷಗಳಿಂದ ಪುನರ್ವಸತಿಗೊಂಡ ತಮಿಳು ಸಮುದಾಯದವರು ಈ ವಿಶೇಷ ಸಂಪ್ರದಾಯವನ್ನು ನಿರಂತರವಾಗಿ ಉಳಿಸಿಕೊಂಡು ಬರುತ್ತಿರುವುದು ಗಮನಾರ್ಹ. ತಮಿಳು ಸಮುದಾಯದವರಷ್ಟೇ ಅಲ್ಲದೆ, ಗ್ರಾಮದಲ್ಲಿ ವಾಸಿಸುವ ಎಲ್ಲ ಸಮುದಾಯದ ಜನರೂ ಈ ಪೊಂಗಲ್ ಆಚರಣೆಯಲ್ಲಿ ಭಾಗವಹಿಸಿ ಏಕತೆಯನ್ನು ಬೆಳೆಸುತ್ತಿದ್ದಾರೆ.

ಪೊಂಗಲ್ ಹಬ್ಬದ ದಿವ್ಯ ಬಲಿ ಪೂಜೆಯನ್ನು ರೆವರೆಂಡ್ ಫಾದರ್ ಪೋಲ್ ರಾಜ್ ಪೌಲ್ ರಾಜ್ ಸಿಂಧನೂರು ವಲಯದ ಮುಖ್ಯ ಗುರುಗಳಾದ ಫಾದರ್ ಜ್ಞಾನಪ್ರಕಾಶ್ ಹಾಗೂ ಬರ್ಮಾ ಕ್ಯಾಂಪ್ ವಿಚಾರಣಾ ಗುರುಗಳಾದ ಫಾದರ್ ಪಿ.ಜೆ. ಹೃದಯ ರಾಜ್ ಫಾದರ್ ಸುಂದರ್ ರಾಜ್ ಅವರುಗಳು ಭಕ್ತರಿಗಾಗಿ ನೆರವೇರಿಸಿದರು. ಆರೋಗ್ಯ ಮಾತೆ ದೇವಾಲಯದ ಪಾಲನಾ ಸಮಿತಿಯ ಸದಸ್ಯರು, ಭಕ್ತಾದಿಗಳು ಹಾಗೂ ಗ್ರಾಮಸ್ಥರು ಈ ಪೊಂಗಲ್ ಆಚರಣೆಯಲ್ಲಿ ಸಕ್ರಿಯವಾಗಿ ಪಾಲ್ಗೊಂಡು, ಶಾಂತಿ, ಸಮೃದ್ಧಿ ಮತ್ತು ಸಹೋದರತ್ವಕ್ಕಾಗಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು.

## ಸಂಕ್ರಾಂತಿಯನ್ನು ಸಂಭ್ರಮಿಸಿದ ಜನತೆ ;ತುಂಗಭದ್ರ ನದಿಯಲ್ಲಿ ಪವಿತ್ರ ಸ್ನಾನ

❑ ನೈಜ್ಯ ದೆಸೆ ನ್ಯೂಸ್



**ಮಾನ್ವಿ: ಸಂಕ್ರಾಂತಿ ಹಬ್ಬದ ಪ್ರಯುಕ್ತ ಇಂದು ಚಿಕಲಪರ್ವಿಯ ತುಂಗಭದ್ರ ನದಿತೀರದಲ್ಲಿ ಸಾವಿರಾರು ಭಕ್ತರು ಮತ್ತು ಕುಟುಂಬಗಳು ಸೇರಿ ಹಬ್ಬವನ್ನು ಸಂಭ್ರಮದಿಂದ ಆಚರಿಸಿದರು.**

ಮುಂಜಾನೆಯಿಂದಲೇ ನದಿಯಲ್ಲಿ ಪವಿತ್ರಸ್ನಾನ, ಪೂಜೆ ಪುನಸ್ಕಾರಗಳು ನಡೆಯುತ್ತಿದ್ದು, ಹಬ್ಬದ ವಾತಾವರಣ ಕಂಡುಬಂದಿತು. ನದಿತೀರದ ಮರಳು ಪ್ರದೇಶಗಳಲ್ಲಿ ಕುಟುಂಬಗಳು ಪಂಗಡವಾಗಿ ಕುಳಿತು ಊಟೋಪಚಾರ ನಡೆಸಿದರೆ, ಮಹಿಳೆಯರು ಹಾಗೂ ಮಕ್ಕಳು ಪರಸ್ಪರ ಹಬ್ಬದ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು.

ಕೆಲವರು ತಾತ್ಕಾಲಿಕ ಗುಡಾರಗಳನ್ನು ಹಾಕಿಕೊಂಡು ದಿನವಿಡೀ ವಿಶ್ರಾಂತಿ ಹಾಗೂ ಸಂಭ್ರಮದಲ್ಲಿ ತೊಡಗಿದರು. ನದಿಯಲ್ಲಿ ಸ್ನಾನ ಮಾಡುವವರ ಸಂಖ್ಯೆ ಹೆಚ್ಚಾಗಿದ್ದರಿಂದ ತೀರದಲ್ಲಿ ಚಟುವಟಿಕೆಗಳು ಗಟ್ಟಿಯಾಗಿ ಕಂಡುಬಂದವು. ಸ್ಥಳಕ್ಕೆ ಪೊಲೀಸ್ ಇಲಾಖೆ ಹಾಗೂ ಸ್ಥಳೀಯ ಆಡಳಿತದ ಸಿಬ್ಬಂದಿ ಭೇಟಿ ನೀಡಿ ಪರಿಸ್ಥಿತಿಯನ್ನು ಪರಿಶೀಲಿಸಿದರು.

## ಶಾಂತಿ, ಕಾನೂನು ಸುವ್ಯವಸ್ಥೆ ಬಲಗೊಳಿಸಲು ಕ್ರಮ: ಎಸ್‌ಪಿ

❑ ನೈಜ್ಯ ದೆಸೆ ನ್ಯೂಸ್



**ರಾಯಚೂರು: 'ಪೊಲೀಸ್ ಸಿಬ್ಬಂದಿಯಲ್ಲಿ ಶಿಸ್ತು ಹೆಚ್ಚಿಸುವುದು. ಮಾದಕ ವಸ್ತುಗಳ ಮಾರಾಟಕ್ಕೆ ಸಂಪೂರ್ಣ ಕಡಿವಾಣ ಹಾಕುವುದು ಹಾಗೂ ಶಾಂತಿ, ಕಾನೂನು ಸುವ್ಯವಸ್ಥೆ ಬಲಗೊಳಿಸುವುದು ನಮ್ಮ ಆದ್ಯತೆಯಾಗಿದೆ' ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಶು ಗಿರಿ ಹೇಳಿದರು. 'ಜಿಲ್ಲೆಯ ವಿವಿಧ ಪೊಲೀಸ್ ಠಾಣೆಗಳಿಗೆ ಭೇಟಿಕೊಟ್ಟು ಪರಿಶೀಲಿಸಿದ್ದೇನೆ.**

ಕೆಲವು ಪೊಲೀಸ್ ಠಾಣೆಗಳಲ್ಲಿ ಶಿಸ್ತಿನ ಕೊರತೆ ಕಂಡು ಬಂದಿದ್ದು, ಅದನ್ನು ಸಹಿಸಿಕೊಳ್ಳಲಾಗದು. ನಿತ್ಯ ಕವಾಯತು ಮಾಡಬೇಕು. ಪಾರದರ್ಶಕತೆಯನ್ನೂ ಕಾಯ್ದುಕೊಳ್ಳುವಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ' ಎಂದು ನಗರದಲ್ಲಿ ಮಂಗಳವಾರ ಮಾಧ್ಯಮಗೋಷ್ಠಿಯಲ್ಲಿ ತಿಳಿಸಿದರು. 'ಠಾಣೆ ವ್ಯಾಪ್ತಿಯ ಅಪರಾಧ ಪ್ರಕರಣಗಳು, ಶಿಕ್ಷೆ ಮತ್ತು ರೂಢಿಗತ ಅಪರಾಧಗಳ ಮಾಹಿತಿ ಪಡೆಯಲಾಗಿದೆ. ಅವರ ಮೊಬೈಲ್‌ಗಳನ್ನು ಪರಿಶೀಲಿಸಿ ಮನಸ್ಥಿತಿಯನ್ನು ಅರಿತುಕೊಳ್ಳಲು ಪ್ರಯತ್ನಿಸಲಾಗಿದೆ. ಕ್ರಿಮಿನಲ್‌ಗಳ ವಾಟ್ಸ್-ಆಯಪ್‌ಗಳ ಮೇಲೆ ನಿಗಾ ಇಡಲಾಗಿದೆ. ನಗರ ವ್ಯಾಪ್ತಿಯಲ್ಲಿ 8 ಸಾವಿರ ಸಿಸಿಟಿವಿ ಕ್ಯಾಮೆರಾಗಳು ಇವೆ. ಮಾಲ್, ವಾಣಿಜ್ಯ ಮಳಿಗೆಗಳ ಮಾಲೀಕರಿಗೆ ರಸ್ತೆಗೆ ಮುಖ ಮಾಡಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸುವಂತೆ ಸೂಚನೆ ನೀಡಲಾಗಿದೆ' ಎಂದು ಹೇಳಿದರು.

'ಜಿಲ್ಲೆಯಲ್ಲಿ 1300 ಮಂಜೂರಾತಿ ಸಿಬ್ಬಂದಿಗಳಲ್ಲಿ 1100 ಜನರು ಕಾರ್ಯ ನಿರ್ವಹಿಸುತ್ತಿದ್ದಾರೆ. ಸಿಬ್ಬಂದಿ ಕೊರತೆ ಮಧ್ಯೆಯೂ ಉತ್ತಮ ಸೇವೆ ಕೊಡುವಂತೆ ತಿಳಿವಳಿಕೆ ನೀಡಲಾಗಿದೆ. ವಿಶೇಷ ಜಾತ್ರೆ, ಜಯಂತಿ ಹಾಗೂ ಹಬ್ಬದ ಸಂದರ್ಭದಗಳಲ್ಲಿ ಶಾಂತಿಪಾಲನಾ ಸಭೆಗಳನ್ನು ನಡೆಸುವಂತೆ ಪೊಲೀಸ್ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಇದರಿಂದ ಅಪರಾಧ ಪ್ರಕರಣಗಳನ್ನು ನಿಯಂತ್ರಿಸಲು ಸಾಧ್ಯವಾಗುತ್ತದೆ' ಎಂದು ತಿಳಿಸಿದರು. 'ಸಿಎಚ್ ಪೌಡರ್ ಅಕ್ರಮ ಸಾಗಣೆ, ಮಟ್ಕಾ, ಇಸ್ಪೀಟ್ ಜೂಜಾಟಗಳ ಸೇರಿದಂತೆ ನಿಗಾವಹಿಸಲು ಕ್ರಮ ವಹಿಸಲಾಗುತ್ತದೆ. ಮಾದಕ ದ್ರವ್ಯ ಸಾಗಣೆ, ಶಾಂತಿ, ಕಾನೂನು ಸುವ್ಯವಸ್ಥೆಗೆ ಸಾರ್ವಜನಿಕರ ಸಹಕಾರವೂ ಅಗತ್ಯ' ಎಂದು ಹೇಳಿದರು.

'ರಾಯಚೂರಿನ ಕೇಂದ್ರ ಬಸ್‌ನಿಲ್ದಾಣ, ಸಿಂಧನೂರು ಹಾಗೂ ಲಿಂಗಸುಗೂರು ಬಸ್ ನಿಲ್ದಾಣಗಳಲ್ಲಿ ಕಳ್ಳತನ ಪ್ರಕರಣಗಳು ಹೆಚ್ಚುತ್ತಿರುವ ದೂರುಗಳು ಬರುತ್ತಿವೆ. ಪೊಲೀಸ್ ಗಸ್ತು ಹೆಚ್ಚಿಸಲಾಗುವುದು. ನಗರದಲ್ಲಿ ಜನನಿಬಿಡ ಪ್ರದೇಶದಲ್ಲಿ ಸಂಚಾರ ಒತ್ತಡ ಕಡಿಮೆ ಮಾಡಲು ಮಹಾನಗರಪಾಲಿಕೆ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿ ಒಂದು ದಿನ ಕಾರ್ಯಾಚರಣೆ ನಡೆಸಿ ಸರಿಪಡಿಸಲು ಪ್ರಯತ್ನಿಸಲಾಗುವುದು' ಎಂದು ತಿಳಿಸಿದರು.

## ಕಡಲೆಬೇಳೆಗೆ ಬೆಂಬಲ ಬೆಲೆ ನೀಡುವಂತೆ ಕೇಂದ್ರಕ್ಕೆ ಸಿಎಂ ಪತ್ರ

❑ ನೈಜ್ಯ ದೆಸೆ ನ್ಯೂಸ್



**ಬೆಂಗಳೂರು: ಮಾರುಕಟ್ಟೆ ಬೆಲೆ ಕುಸಿತದಿಂದ ಸಂಕಷ್ಟದಲ್ಲಿರುವ ಕಡಲೇಬೇಳೆ ಬೆಳೆಗಾರರ ನೆರವಿಗೆ ಧಾವಿಸಲು ಕೂಡಲೇ ಬೆಂಬಲ ಬೆಲೆಯಡಿ ಖರೀದಿ ಕೇಂದ್ರ ಆರಂಭಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹ್ವಾಣ್ ಅವರಿಗೆ ಪತ್ರ ಬರೆದಿದ್ದಾರೆ.**

ಕಡಲೇಬೇಳೆ ಕರ್ನಾಟಕದ ಪ್ರಮುಖ ದ್ವಿದಳ ಧಾನ್ಯ ಬೆಳೆಗಳಲ್ಲಿ ಒಂದಾಗಿದೆ. 9.24 ಲಕ್ಷ ಹೆಕ್ಟೇರ್‌ನಲ್ಲಿ ಬಿತ್ತನೆಯಾಗಿದ್ದು, 6.27 ಲಕ್ಷ ಮೆಟ್ರಿಕ್ ಟನ್ ಉತ್ಪಾದನೆ ನಿರೀಕ್ಷಿಸಲಾಗಿದೆ. ಧಾರವಾಡ, ಗದಗ, ಬೆಳಗಾವಿ, ವಿಜಯಪುರ, ಕಲಬುರಗಿ, ಯಾದಗಿರಿ, ಬೀದರ್, ರಾಯಚೂರು, ಕೊಪ್ಪಳ, ಬಳ್ಳಾರಿ, ಚಿತ್ರದುರ್ಗ, ಬಾಗಲಕೋಟೆ, ದಾವಣಗೆರೆ ಮತ್ತು ಚಿಕ್ಕಮಗಳೂರು ಮುಂತಾದ ಪ್ರದೇಶಗಳ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಇದು ಆದಾಯದ ಮೂಲವಾಗಿದೆ. ಅನಿಶ್ಚಿತ ಹವಾಮಾನ ಪರಿಸ್ಥಿತಿಗಳ ಬಳಿಕವೂ ಅನೇಕ ತಿಂಗಳ ಕಠಿಣ ಪರಿಶ್ರಮದ ಮೂಲಕ ಕಡಲೇಬೇಳೆ ಫಸಲು ರೈತರ ಕೈ ಸೇರುತ್ತಿದೆ. ಆದರೆ ಮಾರುಕಟ್ಟೆಯಲ್ಲಿ ಬೆಲೆ ಕುಸಿತವಾಗಿ ರೈತರಿಗೆ ಅನ್ಯಾಯವಾಗುತ್ತಿದೆ ಎಂದಿದ್ದಾರೆ.

ಕೇಂದ್ರ ಸರ್ಕಾರ 2026-27ನೇ ಸಾಲಿನಲ್ಲಿ ಕಡಲೆ ಬೇಳೆ ಪ್ರತಿ ಕ್ವಿಂಟಲ್‌ಗೆ 5,875 ರೂಪಾಯಿ ದರ ನಿಗದಿ ಮಾಡಿದೆ. ಪ್ರಸ್ತುತ ಮಾರುಕಟ್ಟೆಯಲ್ಲಿ ಪ್ರತಿ ಕ್ವಿಂಟಲ್‌ಗೆ 4,260 ರಿಂದ 5,813 ರವರೆಗೂ ದರ ಇದೆ. ಸರಿ ಸುಮಾರು 800 ರಿಂದ 1,200 ರೂಪಾಯಿಗಿಂತಲೂ ಕಡಿಮೆ ಧಾರಣೆಯಿದೆ. ಜನವರಿ ಮತ್ತು ಮಾರ್ಚ್ ತಿಂಗಳ ನಡುವೆ ಫಸಲು ಕೊಯ್ಲು ಹೆಚ್ಚಾಗಲಿದ್ದು, ಆ ವೇಳೆಗೆ ಮತ್ತಷ್ಟು ಬೆಲೆ ಕುಸಿತವಾಗುವ ಆತಂಕ ಇದೆ. ಬೆಲೆ ಕುಸಿತ ಕೇವಲ ಮಾರುಕಟ್ಟೆ ವೈಫಲ್ಯವಲ್ಲ, ಮಾನವ ಬಿಕ್ಕಟ್ಟು. ಇಂತಹ ವೇಳೆ ರೈತರ ನೆರವಿಗೆ ಸರ್ಕಾರ ಧಾವಿಸದಿದ್ದರೆ ಬೆಂಬಲ ಬೆಲೆಯ ಮೇಲಿನ ಸಾಂಸ್ಥಿಕ ಚೌಕಟ್ಟಿನ ಮೇಲೆಯೇ ನಂಬಿಕೆ ಕಳೆದುಕೊಳ್ಳುತ್ತಾರೆ ಎಂದು ಎಚ್ಚರಿಸಿದ್ದಾರೆ.

ಕೃಷಿ ವೆಚ್ಚಗಳು, ಸಾಲ ಬಾಧ್ಯತೆ ಮತ್ತು ಮನೆಯ ಅಗತ್ಯಗಳಿಂದಾಗಿ ಬೆಲೆ ಕುಸಿತದ ನಡುವೆಯೂ ಉತ್ಪನ್ನವನ್ನು ಮಾರಾಟ ಮಾಡುವ ಇಕ್ಕಟ್ಟಿಗೆ ರೈತರು ಸಿಲುಕುತ್ತಾರೆ. ಈ ಹಿನ್ನಲೆಯಲ್ಲಿ ಬೆಂಬಲ ಬೆಲೆ ಯೋಜನೆಯಡಿ ಕಡಲೆ ಬೇಳೆ ಖರೀದಿಗೆ ಕೇಂದ್ರ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ. ಕೇಂದ್ರ ಸರ್ಕಾರದ ನೋಡಲ್ ಏಜೆನ್ಸಿಗಳು ಕರ್ನಾಟಕದಲ್ಲಿ ಕೂಡಲೇ ಖರೀದಿ ಕೇಂದ್ರಗಳನ್ನು ಆರಂಭಿಸಬೇಕು. ರಾಜ್ಯ ಸರ್ಕಾರ ತನ್ನ ಚೌಕಟ್ಟಿನಲ್ಲಿ ತನ್ನ ಪಾಲಿನ ಜವಾಬ್ದಾರಿ ನಿಭಾಯಿಸಲು ಸಂಪೂರ್ಣವಾಗಿ ಸಿದ್ಧವಾಗಿದೆ. ಈಗಾಗಲೇ ಅಗತ್ಯ ಅಧಿಸೂಚನೆಗಳನ್ನು ಹೊರಡಿಸಿದೆ, ರಾಜ್ಯ ಸಂಸ್ಥೆಗಳನ್ನು ಗೊತ್ತುಪಡಿಸಿದೆ, ಮಾರ್ಗಸೂಚಿಗಳ ಪ್ರಕಾರ ಎಲ್ಲಾ ಕಾರ್ಯಗಳನ್ನು ನಿರ್ವಹಿಸಿದೆ. ಖರೀದಿ, ಸಾಗಾಣಿಕೆ, ರೈತರ ನೋಂದಣಿ, ಗೋದಾಮು, ಸಾರಿಗೆ ಮತ್ತು ರಾಜ್ಯ ಸುಂಕಗಳ ವಿನಾಯಿತಿಯನ್ನು ಸುಗಮಗೊಳಿಸಲು ಬದ್ಧವಾಗಿದೆ. ಕೇಂದ್ರ ಸಂಸ್ಥೆಗಳೊಂದಿಗೆ ಸಂಪೂರ್ಣವಾಗಿ ಸಹಕರಿಸಲು ಸಿದ್ಧವಾಗಿದೆ ಎಂದಿದ್ದಾರೆ.